ಸಂಪುಟ : 10 ಸಂಚಿಕೆ: 86 ಪುಟ : 4+2 ಬೆಲೆ: 3.00 ರವಿವಾರ ಮೇ 04 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 86 Pages : 4+2 Price : 3.00 Sunday May 04 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮೇ 4ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ವಾಲ್ಮೀಕಿ ಭವನ, ಕಮತರ ಪ್ಲಾಟ್, ಶಿಗ್ಗಾಂವಿ ಪ್ಲಾಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 3 – ಕುಂಬಾರ ಓಣಿ, ಬಣ್ಣದ ನಗರ, ರಾಜಾಜಿ ರಸ್ತೆ, ಅಯ್ಯಪ್ಪಜ್ಜನ ಗದ್ದುಗೆ, ಕಬಾಡೆ ರಸ್ತೆ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 26 – ಹಳೆ ಬಸ್ ಸ್ಟ್ಯಾಂಡ್, ಬೇವಿನಕಟ್ಟಿ ಭಾಗ – 1, 2, ಜನತಾ ಕಿರಾಣಿ, ಬೂಸ್ಟ್ ಅವರ ಲೈನ್, ಉರ್ದು ಶಾಲೆ ಹಿಂದೆ, ಸಂಗಮ ಬಜಾರ್, ಬಂಗಾರ ಶೆಟ್ಟರ್ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20 – ಬೇವಿನಮರದಮ್ಮ, ಹುಲಿಗೆಮ್ಮನ ಗುಡಿ, ಕೊಟ್ಟೂರ ಅವರ ಲೈನ್, ಶರೀಫ್ ಅಜ್ಜನ ಗದ್ದುಗೆ, ಗೌಳಿಯವರ ಲೈನ್, ರಹಮತ್ ನಗರ 4 ಭಾಗಗಳು. ವಾರ್ಡ್ ನಂ. 27 – ಫಾರ್ಮ್ ಓಣಿ, ಬುಳ್ಳಾ ಪ್ಲಾಟ್ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಮಕಾತಿ ಪ್ರಕಟಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ ರೂಪ್ 2024–25 ಅನುಮೋದನೆಯಂತೆ ಮಕ್ಕಳ ಆರೋಗ್ಯ ಕಾರ್ಯಕ್ರಮದ ಎನ್.ಬಿ.ಎಸ್.ಯು ವಿಭಾಗದಲ್ಲಿ ಒಟ್ಟು 12 ಶುಶ್ರೂಷಕ ಅಧಿಕಾರಿಗಳ ಹುದ್ದೆಗಳು ಅನುಮೋದನೆಯಾಗಿದ್ದು. ಸದರಿ ಹುದ್ದೆಗಳನ್ನು ರೋಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅಪ್ಲೋಡ್ ಆಗಿರುವ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ ತಯಾರಿಸಿದ ರೋಷ್ಟರ್ ಸಂಖ್ಯೆ 09,10&14ರ ಮೆರಿಟ್ ಪಟ್ಟಿಯ ಮುಂದಿನ 01:10 ಅನುಪಾತದಲ್ಲಿನ ಅಭ್ಯರ್ಥಿಗಳನ್ನು ದಿನಾಂಕ:05.05.2025 ರಿಂದ 09.05.2025ರ ಸಂಜೆ 04.00 ಗಂಟೆಯವರೆಗೆ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ:101, ಜಿಲ್ಲಾ ಆಡಳಿತ ಭವನ, ಗದಗ ಇಲ್ಲಿಗೆ ತಮ್ಮ ಮೂಲ ದಾಖಲಾತಿಗಳೊಂದಿಗೆ ಪರಿಶೀಲನಗೆ ಹಾಜರಾಗಲು ಇ–ಮೇಲ್ ಮೂಲಕ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರವಿ ಗುಂಜೀಕರ ನಿವೃತ್ತಿ ಅಂಗವಾಗಿ ಮಹಿಳಾ ದಿನಾಚರಣೆ । ಮಹಿಳೆಯರ ಸನ್ಮಾನ ಸಮಾರಂಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್

# ಮಹಿಳೆಯರಿಂದಲೇ ಬದುಕಿಗೆ ಜೀವಕಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ದಿನಾಚರಣೆ ಕೇವಲ ಒಂದು ದಿನಕ್ಕೆ ಸೀಮಿತವಲ್ಲ. ಜೀವನದಲ್ಲಿ ಮಹಿಳೆಯರ ಪಾತ್ರ ಅನನ್ಯವಾಗಿದ್ದು, ಅವರಿಂದಲೇ ಜೀವನಕ್ಕೆ ಜೀವಕಳೆ ಬರಲು ಸಾಧ್ಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ನುಡಿದರು.

ಅವರು ಶನಿವಾರ ಜಿಲ್ಲಾಡಳಿತ ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮಾಜಿ ಜಿಲ್ಲಾಧ್ಯಕ್ಷ ಹಾಗೂ ಸರ್ಕಾರಿ ನೌಕರರ ಸಂಘದ ನಿಕಟಪೂರ್ವ ಅಧ್ಯಕ್ಷರಾದ ರವಿ ಎಲ್.ಗುಂಜೀಕರ ಅವರ ನಿವೃತ್ತಿ ಅಂಗವಾಗಿ ಹಮ್ಮಿಕೊಂಡಿದ್ದ ಮಹಿಳಾ ದಿನಾಚರಣೆ ಹಾಗೂ ಮಹಿಳೆಯರಿಗೆ ವಿಶೇಷ ಸೇವಾ ಗೌರವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಪುರುಷನ ಜೀವನದಲ್ಲಿ ತಾಯಿ, ಹೆಂಡತಿ, ಸಹೋದರಿ, ಸ್ನೇಹಿತೆ ಹೀಗೆ ಅನೇಕ ಪಾತ್ರಗಳನ್ನು ನಿರ್ವಹಿಸಿ ಅವನ ಬದುಕನ್ನು ಹಸನಾಗಿಸುವ ಮಹಿಳೆ ಪುರುಷರಿಗಿಂತ ಹೆಚ್ಚಾಗಿ ಸಂಸಾರದ ಜವಾಬ್ದಾರಿಯನ್ನು ಹೊರುತ್ತಾಳೆ. ರವಿ ಗುಂಜೀಕರ ಅವರು ತಮ್ಮ ನಿವೃತ್ತಿ ಅಂಗವಾಗಿ ಮಹಿಳಾ ದಿನಾಚರಣೆಯನ್ನು ಆಚರಿಸಲು ನಿರ್ಧರಿಸಿ ಅತೀ ಕಡಿಮೆ ಅವಧಿಯಲ್ಲಿ ಇಂಥಹ ಕಾರ್ಯಕ್ರಮ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು.



ಅತಿಥಿಗಳಾಗಿ ಆಗಮಿಸಿದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ ಮಾತನಾಡಿ, ಮಹಿಳೆಯರ ಪಾತ್ರವು ಸಮಾಜದಲ್ಲಿ ಅಂತರ್ಗತವಾಗಿದ್ದು, ಮೇಲ್ನೋಟಕ್ಕೆ ಅದರ ಮಹತ್ವ ಕಂಡುಬರುವುದಿಲ್ಲ. ಇತ್ತೀಚಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ವಿದ್ಯಾರ್ಥಿನಿಯರೇ ಮೇಲುಗೈ ಸಾಧಿಸುತ್ತಿದ್ದಾರೆ. ಸಾಮಾಜಿಕ, ಆರ್ಥಿಕ, ರಾಜಕೀಯ ಹೀಗೆ ಎಲ್ಲ ಕ್ಷೇತ್ರಗಳಲ್ಲೂ ಮಹಿಳೆ ತನ್ನ ಛಾಪು ಮೂಡಿಸುತ್ತಿದ್ದಾಳೆ. ಸಮಾಜದಲ್ಲಿ ಮಹಿಳೆಯರ ಮೇಲೆ ನಡೆಯುತ್ತಿರುವ ದೌರ್ಜನ್ಯವನ್ನು ನಿಲ್ಲಿಸಲು ಮಕ್ಕಳಿಗೆ ಬಾಲ್ಯದಲ್ಲೇ ಲಿಂಗತಾರತಮ್ಯದ ಕುರಿತು ಜಾಗೃತಿ ಮೂಡಿಸಬೇಕು ಎಂದರು.

ಸಮಾರಂಭದಲ್ಲಿ ಸರ್ಕಾರಿ ಇಲಾಖೆಗಳು ಸೇರಿದಂತೆ ಹಲವು ರಂಗಗಳಲ್ಲಿ ವಿಶಿಷ್ಠ ಸೇವೆ ಸಲ್ಲಿಸಿರುವ 60 ಮಹಿಳೆಯರನ್ನು ಸನ್ಮಾನಿಸಿ ಗೌರವಿಸಲಾಯಿತು. ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ತಾರಾಮಣಿ, ಸರ್ಕಾರಿ ಮಹಿಳಾ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಜಯಶ್ರೀ ಶ್ರೀಗಿರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಗಳಾದ ಅನುಪಮಾ ಅಂಗಡಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

> ಆರೋಗ್ಯ ಇಲಾಖೆಯ ಅಧಿಕಾರಿಗಳಾದ ಮೀನಾಕ್ಷಿ ಮಾತನಾಡಿ, ಸರ್ಕಾರಿ ನೌಕರರ ನಿವೃತ್ತಿ ಕಾರ್ಯಕ್ರಮಗಳು ತೀರಾ ಔಪಚಾರಿಕವಾಗಿರುತ್ತವೆ. ಆದರೆ, ರವಿ ಗುಂಜೀಕರ ಅವರ ನಿವೃತ್ತಿ ಅಂಗವಾಗಿ ಆಯೋಜಿಸಿರುವ ಅರ್ಥಪೂರ್ಣ ಕಾರ್ಯಕ್ರಮಗಳು ನಿಜಕ್ಕೂ ಬೆರಗು ಮೂಡಿಸಿವೆ. ಮಹಿಳಾ ಸಬಲೀಕರಣ ಎನ್ನುವುದು ಕೇವಲ ಮಾತಿನಲ್ಲಿ ಇರದೇ, ನಿಜಕ್ಕೂ ಜಾರಿಯಾಗಬೇಕು. ಇಂದಿಗೂ ಜೀವನದ ಅನೇಕ ನಿರ್ಧಾರಗಳಲ್ಲಿ ಪರಾವಲಂಬಿಯಾಗಿರುವ ಮಹಿಳೆಗೆ ಅವಳ ಆಶೋತ್ತರಗಳನ್ನು ವ್ಯಕ್ತಪಡಿಸಲು ಅವಕಾಶ ನೀಡಬೇಕು ಎಂದು ಅಭಿಪ್ರಾಯಪಟ್ಟರು.

ರವಿ ಗುಂಜೀಕರ ಅಭಿಮಾನಿ ಬಳಗದ ಉಪಾಧ್ಯಕ್ಷ ಎಸ್.ಆರ್. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ ಸ್ವಾಗತಿಸಿದರು. ರವಿ ಗುಂಜೀಕರ ಅಭಿಮಾನಿ ಸಂಘದ ಗೌರವಾಧ್ಯಕ್ಷ ಡಿ.ಎಸ್. ತಳವಾರ, ಅಧ್ಯಕ್ಷರಾದ ಅರುಣಕುಮಾರ ಚವ್ಹಾಣ, ಕಾರ್ಯದರ್ಶಿ ಕೆ.ಎಫ್. ಹಳ್ಯಾಳ, ಆರ್.ಎಂ. ನಿಂಬನಾಯ್ಕರ್, ಮಂಜು ಮಾನೆ, ಶಿವಾಜಿ ಪಾವನ ಸೇರಿದಂತೆ ರವಿ ಗುಂಜೀಕರ ಅಭಿಮಾನಿಗಳು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

### 'ಜನತಾ ಸದನ' ಕಾರ್ಯಕ್ರಮದಲ್ಲಿ ಬಿ.ಬಿ. ಅಸೂಟಿ ಕರೆ

# 'ಗ್ಯಾರಂಟಿ' ಸಮಸ್ಯೆಗಳನ್ನು ಪರಿಹರಿಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಯೋಜನೆಗಳನ್ನು ಪಡೆಯುವಲ್ಲಿ ಎದುರಾದ ಸಮಸ್ಯೆಗಳ ಪರಿಹಾರಕ್ಕೆ ಜನರು ಜನತಾ ಸದನದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನಾ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಎ.ಸಿ ಕಛೇರಿ ಅವರಣದಲ್ಲಿರುವ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರಿದ ಕಛೇರಿಯಲ್ಲಿ ಶನಿವಾರ ನಡೆದ ಜನತಾ ಸದನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರದಿಂದ ಅನುಷ್ಠಾನವಾಗಿರುವ ಪಂಚ ಗ್ಯಾರಂಟಿ ಯೋಜನೆ ಪಡೆಯುವಲ್ಲಿ ಎದುರಾಗುವ ಸಮಸ್ಯೆಗಳ ಪರಿಹಾರಕ್ಕೆ ಜನತಾ ಸದನವನ್ನು ಪ್ರಾರಂಭಿಸಲಾಗಿದೆ. ನಗರದಲ್ಲಿ ಗ್ಯಾರಂಟಿ ಯೋಜನೆಗಳಿಂದ ವಂಚಿತರಾಗಿರುವವರು ಜನತಾ ಸದನದಲ್ಲಿ ಪಾಲ್ಗೊಂಡು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಹಾಗೂ ಉಳಿದ ತಾಲೂಕಿನವರು ವಾಟ್ಸಾಪ್ ಮೂಲಕ ತಮ್ಮ ದಾಖಲೆಗಳೊಂದಿಗೆ ಸಮಸ್ಯೆಗಳನ್ನು ಹಂಚಿಕೊಳ್ಳಬಹುದಾಗಿದೆ ಎಂದು ಹೇಳಿದರು.




ಅನ್ನಭಾಗ್ಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಆಹಾರ ಇಲಾಖೆಯ ಅಧಿಕಾರಿಗಳು ಪಡಿತರ ಅಂಗಡಿದಾರರ ಜೊತೆಗೆ ಸಭೆ ನಡೆಸಬೇಕು. ಅನ್ನಭಾಗ್ಯದ ಅಕ್ಕಿಯು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಅಕ್ಕಿಯು ಪೋಲಾಗದಂತೆ ಜಾಗೃತೆ ವಹಿಸಬೇಕು. ಇಲಾಖೆ ಅಧಿಕಾರಿಗಳು ಗ್ಯಾರಂಟಿ ಯೋಜನೆಯ ಪ್ರಗತಿಯ ಕುರಿತು ನಿಖರ ಮಾಹಿತಿ ಒದಗಿಸಬೇಕು. ಗೃಹಲಕ್ಷ್ಮೀ ಹಾಗೂ ಯುವ ನಿಧಿ ಯೋಜನೆಯ ಕುರಿತು ಇನ್ನೂ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಕೆಲವರು ವ್ಯಾಪಾರಕ್ಕಾಗಿ ಜಿಎಸ್‌ಟಿಯನ್ನು ಪ್ರಾರಂಭಿಸಿದ್ದು, ತದನಂತರ ಅದನ್ನು ನಿಷ್ಕ್ರಿಯಗೊಳಿಸಿದ್ದಾರೆ. ಟ್ಯಾಕ್ಸ್ ಫೇರ್ ಪಟ್ಟಿಯಲ್ಲಿ ಅವರ ಹೆಸರು ಬಂದಿದ್ದು, ಅವರ ಸಮಸ್ಯೆಯನ್ನು ಅವಲೋಕಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ತಾಲೂಕು ಗ್ಯಾರಂಟಿ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಅಂಗನವಾಡಿ ಮೇಲ್ವಿಚಾರಕಿಯರು ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಸಭೆ ಕರೆದು ಸರ್ವೆ ಕಾರ್ಯ ಚುರುಕುಗೊಳಿಸಬೇಕೆಂದು ತಿಳಿಸಿದರು.

> ನಗರದ ಹಳೇ ಬಸ್ ನಿಲ್ದಾಣ ಹಾಗೂ ಹೊಸ ಬಸ್ ನಿಲ್ದಾಣದಲ್ಲಿ ಸ್ವಚ್ಛತೆಗೆ ಕ್ರಮ ವಹಿಸಬೇಕು. ನಗರದ ವಿವಿಧ ಪ್ರದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಓಡಾಡುತ್ತಿದ್ದು, ಹೆಚ್ಚಿನ ಬಸ್‌ಗಳನ್ನು ಕಲ್ಪಿಸಲು ಕೆಎಸ್‌ಆರ್‌ಟಿಸಿಯವರು ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಬೇಕು. ಬೇಕಾಗಿರುವ ಬಸ್‌ಗಳ ಸಂಖ್ಯೆ ಹಾಗೂ ಸಿಬ್ಬಂದಿಗಳ ಸಂಖ್ಯೆಗಳ ಕುರಿತು ಮಾಹಿತಿ ಒದಗಿಸಬೇಕೆಂದು ಬಿ.ಬಿ. ಅಸೂಟಿ ತಿಳಿಸಿದರು.

ಸಭೆಯಲ್ಲಿ ನೀಲಮ್ಮ ಬೋಳ್ಳಮ್ಮನವರ, ಶಂಭು ಕಾಳೆ, ವೀರಯ್ಯ ಮಠಪತಿ, ಶರಣಪ್ಪ ಬೆಟಗೇರಿ, ಸಾವಿತ್ರಿ ಹೂಗಾರ, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಿತ ಅಧಿಕಾರಿಗಳು ಹಾಜರಿದ್ದರು.

## ಗ್ಯಾರಂಟಿ ಯೋಜನೆಗಳು ಬಡವರ ಬಾಳಿನ ಬೆಳಕು




■ ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಬಡವರ ಬದುಕು ಉಜ್ವಲಗೊಂಡಿದೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ತಾ.ಪಂ ಸಭಾಂಗಣದಲ್ಲಿ ನವೀಕೃತಗೊಂಡ ನೂತನ ಗ್ಯಾರಂಟಿ ಕಾರ್ಯಾಲಯವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಗ್ಯಾರಂಟಿ ಯೋಜನೆಗಳಿಗೆ ಸರಕಾರ 52 ಸಾವಿರ ಕೋಟಿರೂಗಳನ್ನು ಖರ್ಚು ಮಾಡುತ್ತಿದೆ. ಇದರಿಂದ ಬಡ ಕುಟುಂಬಗಳು ನೆಮ್ಮದಿಯ ಜೀವನ ನಡೆಸುತ್ತಿವೆ. ಮುಖ್ಯವಾಗಿ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ಪಾಲಕರು ನೀಡುತ್ತಿರುವುದು ಮಹತ್ವದ ಬೆಳವಣಿಗೆಯಾಗಿದ್ದು, ಇಂದು ಇಡೀ ದೇಶ ಗ್ಯಾರಂಟಿ ಯೋಜನೆಗಳತ್ತ ಮುಖ ಮಾಡಿದೆ ಎಂದರು. ಬಿಜೆಪಿಯವರು ಬಡವರಿಗೆ ಆಸರೆಯಾಗುವ ಯೋಜನೆಗಳನ್ನು ವಿರೋಧಿಸುತ್ತ ಅಪಹಾಸ್ಯ ಮಾಡುತ್ತಿದ್ದರು. ವಿಪರ್ಯಾಸವೆಂದರೆ, ಅವರ ಪಕ್ಷದ ಪ್ರಧಾನಿಗಳೇ ಗ್ಯಾರಂಟಿ ಯೋಜನೆಗಳನ್ನು ನಕಲು ಮಾಡಿ ತಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಘೋಷಿಸಿದರು, ಅನೇಕ ರಾಜ್ಯಗಳಲ್ಲಿ ಜಾರಿಗೆ ತಂದರು ಎನ್ನುವುದನ್ನು ಬಿಜೆಪಿಯವರು ಮರೆಯಬಾರದು ಎಂದರು. ವಿಶ್ವ ಸಂಸ್ಥೆ ಕೂಡ ಕರ್ನಾಟಕ ಕಾಂಗ್ರೆಸ್ ನೇತೃತ್ವದ ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಪ್ರಸಂಶೆ ವ್ಯಕ್ತಪಡಿಸಿ, ಈ ಯೋಜನೆಗಳು ಬಡವರ ಬಾಳಿಗೆ ಬೆಳಕು ನೀಡಿವೆ ಎಂದಿದೆ. ಹೀಗಾಗಿ ಕಾಂಗ್ರೆಸ್ ಪಕ್ಷ ಬಡವರ ಪರವಾಗಿದೆ ಎನ್ನುವುದು ಮತ್ತೊಮ್ಮೆ ಸಾಬೀತಾಗಿದೆ ಎಂದರು.

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ತಹಸೀಲ್ದಾರ ನಾಗರಾಜ ಕೆ, ತಾ.ಪಂ ಇಒ ಚಂದ್ರಶೇಖರ ಕಂದಕೂರ, ವಿ.ಆರ್. ಗುಡಿಸಾಗರ, ವೀರಣ್ಣ ಶೆಟ್ಟರ, ಯೂಸುಪ್ ಇಟಗಿ, ಬಸವರಾಜ ನವಲಗುಂದ, ಗೀತಾ ಮಾಡಲಗೇರಿ, ದುರ್ಗಪ್ಪ ಹಿರೇಮನಿ ಸೇರಿದಂತೆ ಪುರಸಭೆ ಹಾಗೂ ಗ್ಯಾರಂಟಿ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

## ನೇರ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿಗೆ ಗದಗ ಜಿಲ್ಲೆಯಲ್ಲಿರುವ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲೆಗಳಲ್ಲಿ ವಿಶೇಷ ವರ್ಗದ ಖಾಲಿ ಇರುವ 6ನೇ ತರಗತಿಯ ಸ್ಥಾನಗಳಿಗೆ ದಾಖಲಾತಿ ಸಂಬಂಧಿಸಿ ಆನ್‌ಲೈನ್ ಮೂಲಕ ನೇರ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಶೇಷ ವರ್ಗಕ್ಕೆ ಸೇರಿದ ಮಕ್ಕಳ ಪೋಷಕರು https://cetonline.karnataka.gov.in/kreis2025formsdhome.aspx ನಲ್ಲಿ ಋಂಖಿಖ ಸಂಖ್ಯೆ ದಾಖಲಿಸಿ ವಿಶೇಷ ವರ್ಗವನ್ನು ಆಯ್ಕೆ ಮಾಡಿದಾಗ ವಿಶೇಷ ವರ್ಗಕ್ಕೆ ಲಭ್ಯವಿರುವ ಸೀಟುಗಳ ವಿವರ ಲಭಿಸುತ್ತದೆ. ನಿಗದಿತ ವಿಶೇಷ ವರ್ಗಕ್ಕೆ ಸೀಟು ಲಭ್ಯವಿಲ್ಲದೇ ಇದ್ದಲ್ಲಿ ಸೀಟುಗಳ ಸಂಖ್ಯೆ 0 ಎಂದು ಪ್ರದರ್ಶಿತವಾಗುತ್ತದೆ. ಸೀಟು ಲಭ್ಯವಿದ್ದಲ್ಲಿ ಅಭ್ಯರ್ಥಿಯು ದಾಖಲಾತಿ ಆದೇಶ ಪತ್ರವನ್ನು ಮುದ್ರಿಸಿಕೊಂಡು ಸಂಬಂಧಪಟ್ಟ ವಸತಿ ಶಾಲೆಯಲ್ಲಿ ಪ್ರವೇಶ ಪಡೆಯಬಹುದಾಗಿದೆ. ವರ್ಗವಾರು ಹಾಗೂ ವಸತಿ ಶಾಲಾವಾರು ಖಾಲಿಸ್ಥಾನಗಳ ಮಾಹಿತಿಯು https://kreis.karnataka.gov.in/ ಈ ತಾಣದಲ್ಲಿ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ಕ್ರೈಸ್ ವಸತಿ ಶಾಲೆಯ ಪ್ರಾಂಶುಪಾಲರನ್ನು ಭೇಟಿ ಮಾಡಬಹುದು ಅಥವಾ ಸಹಾಯವಾಣಿ ಸಂಖ್ಯೆ–9482300400ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಮೇ 6ರಂದು ತ್ರೈಮಾಸಿಕ ಕೆಡಿಪಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಮೇ 5 ರಂದು ಬೆ 10.30 ಗಂಟೆಗೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಏರ್ಪಡಿಸಿದ್ದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಕಾರಣಾಂತರಗಳಿಂದ ಮೇ 6 ರಂದು ಬೆಳಿಗ್ಗೆ 10.30 ಗಂಟೆಗೆ ನಡೆಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 15 ದಿನಗಳಲ್ಲಿ ಹಕ್ಕುಪತ್ರ ವಿತರಿಸಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಸರಕಾರ ಖರೀದಿಸಿರುವ ಜಮೀನುಗಳಲ್ಲಿ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸುವ ಕಾರ್ಯ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದು, ಮುಂಬರುವ 15 ದಿನಗಳಲ್ಲಿ ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲು ಕ್ರಮ ಕೈಗೊಳ್ಳಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಸೂಚಿಸಿದರು.

ಅವರು ಶನಿವಾರ ಶಿರಹಟ್ಟಿಯ ತಾ.ಪಂ ಕಚೇರಿಯಲ್ಲಿ ಕಂದಾಯ, ಪಿಆರ್‌ಇಡಿ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.

ಶಿರಹಟ್ಟಿ ತಾಲೂಕಿನಲ್ಲಿಯ ಛಬ್ಬಿ ಗ್ರಾ.ಪಂ ವ್ಯಾಪ್ತಿಯ ಛಬ್ಬಿ ಗ್ರಾಮದಲ್ಲಿ 218, ಗುಡ್ಡದಪೂರ ಗ್ರಾಮದಲ್ಲಿ 116, ವಡವಿ ಗ್ರಾ.ಪಂನ ಬೆಳಗಟ್ಟಿ ಗ್ರಾಮದಲ್ಲಿ 97, ಕೊಂಚಿಗೇರಿ ಗ್ರಾಮದ 132, ಮಜ್ಜೂರ ಗ್ರಾಮದ 104, ಪರಸಾಪೂರದ 119 ಅರ್ಹ ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ಶೀಘ್ರವೇ ವಿತರಿಸಬೇಕು. ಇದಕ್ಕೆ ಯಾವುದೇ ತಾಂತ್ರಿಕ ಕಾರಣಗಳನ್ನು ನೀಡದೇ ಫಲಾನುಭವಿಗಳಿಗೆ ನಿಯಮಾನುಸಾರ ಹಕ್ಕುಪತ್ರ ತಲುಪಿಸುವ ಕೆಲಸವನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸವನ್ನು ಸಂಪೂರ್ಣಗೊಳಿಸಬೇಕು.

ಸಂಬಂಧಿಸಿದ ಗ್ರಾ.ಪಂ ಪಿಡಿಓಗಳು ಶೀಘ್ರದಲ್ಲಿಯೇ ಹಕ್ಕುಪತ್ರ ಪಡೆಯುವ ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ತಾಲೂಕು ಪಂಚಾಯಿತಿಗೆ ತಲುಪಿಸಬೇಕು. ಇದರಲ್ಲಿ ಯಾವುದೇ ಲೋಪದೋಷವಾದರೆ ಸಂಬಂಧಿಸಿದವರನ್ನೇ ಹೊಣೆಗಾರರನ್ನಾಗಿಸಲಾಗುವುದು ಎಂದರು.

ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ತಾ.ಪಂ ಇಓ ಆರ್.ವಿ. ದೊಡ್ಡಮನಿ, ಪಿಡಿಓಗಳು, ಗ್ರಾಮ ಆಡಳಿತ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಸಂಪಾದಕೀಯ

# ಶಿಕ್ಷಕರ ನೇಮಕಾತಿ ವಿಷಯ ಕೇವಲ ಹೇಳಿಕೆ ಆಗದಿರಲಿ

ರಾಜ್ಯದಲ್ಲಿ ಶಿಕ್ಷಕರ ಕೊರತೆಯು ಗಂಭೀರ ಸಮಸ್ಯೆಯಾಗಿ ಪರಿಣಮಿಸಿದೆ. ವಿಶೇಷವಾಗಿ ಎಸೆಸೆಲ್ಸಿ ಫಲಿತಾಂಶಗಳ ಮೇಲೆ ಇದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಶಿಕ್ಷಕರಿಲ್ಲದೆ ಗುಣಮಟ್ಟದ ಶಿಕ್ಷಣವನ್ನು ನೀಡುವುದು ಅಸಾಧ್ಯ. ಈ ಹಿನ್ನೆಲೆಯಲ್ಲಿ ಶಿಕ್ಷಣ ಸಚಿವರು ಶಿಕ್ಷಕರ ನೇಮಕಾತಿಯ ಕುರಿತು ನೀಡಿರುವ ಹೇಳಿಕೆಯು ಆಶಾದಾಯಕ ಬೆಳವಣಿಗೆಯಾಗಿದೆ.

ಆದರೆ, ಈ ಹೇಳಿಕೆಯು ಕೇವಲ ಭರವಸೆಯಾಗಿಯೇ ಉಳಿಯಬಾರದು. ಅದು ಕೃತಿರೂಪಕ್ಕೆ ಬಂದಾಗ ಮಾತ್ರ ರಾಜ್ಯದ ಶಿಕ್ಷಣ ವ್ಯವಸ್ಥೆಯು ಸುಧಾರಣೆಯ ಹಾದಿಯಲ್ಲಿ ಸಾಗಲು ಸಾಧ್ಯ.

ಶಿಕ್ಷಕರ ಕೊರತೆಯಿಂದಾಗಿ ಗ್ರಾಮೀಣ ಭಾಗದ ಶಾಲೆಗಳು ತೀವ್ರ ತೊಂದರೆ ಅನುಭವಿಸುತ್ತಿವೆ. ವಿಷಯ ಶಿಕ್ಷಕರಿಲ್ಲದೆ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ. ಇದು ಅವರ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ.

ಎಸೆಸೆಲ್ಸಿ ಹಂತವು ವಿದ್ಯಾರ್ಥಿಗಳ ಶೈಕ್ಷಣಿಕ ಬದುಕಿನ ಪ್ರಮುಖ ಘಟ್ಟವಾಗಿದೆ. ಇಲ್ಲಿನ ಅಸಮರ್ಪಕ ಶಿಕ್ಷಣವು ಮುಂದಿನ ವ್ಯಾಸಂಗಕ್ಕೂ ಅಡ್ಡಿಯುಂಟು ಮಾಡುತ್ತದೆ. ಹಾಗಾಗಿ, ಶಿಕ್ಷಕರ ನೇಮಕಾತಿಯನ್ನು ತ್ವರಿತವಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ಅತ್ಯಂತ ಅವಶ್ಯಕತವಾಗಿದೆ.

ಶಿಕ್ಷಣ ಸಚಿವರು ನೇಮಕಾತಿ ಪ್ರಕ್ರಿಯೆಯ ಕುರಿತು ಸ್ಪಷ್ಟವಾದ ಮಾರ್ಗಸೂಚಿಗಳನ್ನು ನೀಡಬೇಕು. ನೇಮಕಾತಿ ಯಾವಾಗ ನಡೆಯುತ್ತದೆ, ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ, ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತದೆ ಎಂಬ ಬಗ್ಗೆ ನಿಖರವಾದ ಮಾಹಿತಿಯನ್ನು ಸಾರ್ವಜನಿಕರಿಗೆ ತಿಳಿಸಬೇಕು. ಕೇವಲ ಆಶ್ವಾಸನೆಗಳನ್ನು ನೀಡಿದರೆ ಸಾಲದು, ನಿಗದಿತ ಕಾಲಮಿತಿಯೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವ ಇಚ್ಛಾಶಕ್ತಿಯನ್ನು ಸರ್ಕಾರವು ಪ್ರದರ್ಶಿಸಬೇಕು.

ಶಿಕ್ಷಕರ ನೇಮಕಾತಿಯ ಜೊತೆಗೆ, ಈಗಾಗಲೇ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಸಮಸ್ಯೆಗಳಿಗೂ ಸರ್ಕಾರ ಸ್ಪಂದಿಸಬೇಕು. ಅವರ ವೇತನ, ಸೌಲಭ್ಯಗಳು ಮತ್ತು ಕಾರ್ಯಭಾರದ ಕುರಿತು ಗಮನಹರಿಸಬೇಕು. ಶಿಕ್ಷಕರು ನೆಮ್ಮದಿಯಿಂದ ಕಾರ್ಯನಿರ್ವಹಿಸಿದರೆ ಮಾತ್ರ ಗುಣಮಟ್ಟದ ಶಿಕ್ಷಣವನ್ನು ನೀಡಲು ಸಾಧ್ಯ.


## ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮ

# ಸನಾತನ ಸಂಸ್ಕೃತಿಗೆ ಶಂಕರಾಚಾರ್ಯರ ಕೊಡುಗೆ ಅಪಾರ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಭಾರತದಲ್ಲಿ ಸನಾತನ ಧರ್ಮವು ಉಳಿದು, ಬೆಳೆದು ಬರಲು ಆದಿ ಜಗದ್ಗುರು ಶಂಕರಾಚಾರ್ಯರ ಕೊಡುಗೆ ಅಪಾರವಾಗಿದೆ. ಶಂಕರಾಚಾರ್ಯರಿಂದ ನಮ್ಮ ಸನಾತನ ಸಂಸ್ಕೃತಿ, ಧರ್ಮ ಉಳಿದಿದೆ. ತಮ್ಮ ಚಿಕ್ಕ ವಯಸ್ಸಿನಲ್ಲಿಯೇ ಅಖಂಡ ಭಾರತವನ್ನು ಸುತ್ತಿ, ಧರ್ಮ ಪ್ರಚಾರದ ಮೂಲಕ ಒಂದುಗೂಡಿಸುವಲ್ಲಿ ಅವರ ಪಾತ್ರ ಮಹತ್ವದ್ದಾಗಿದೆ ಎಂದು ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಹೇಳಿದರು.

ಅವರು ಶುಕ್ರವಾರ ಸಂಜೆ ನಗರದ ಆಲೂರು ವೆಂಕಟರಾವ್ ಸಭಾಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ತತ್ವಜ್ಞಾನಿಗಳ ದಿನಾಚರಣೆ ಅಂಗವಾಗಿ ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.



ಭಾರತದ ಶ್ರೇಷ್ಠ ಆಧ್ಯಾತ್ಮಿಕ ನಾಯಕರು ಮತ್ತು ತತ್ವಜ್ಞಾನಿಗಳಲ್ಲಿ ಒಬ್ಬರಾದ ಆದಿ ಜಗದ್ಗುರು ಶಂಕರಾಚಾರ್ಯರ ವಿಚಾರಧಾರೆಗಳು, ಸಾಮಾಜಿಕ ಸುಧಾರಣೆಗಳು ಮತ್ತು ಧಾರ್ಮಿಕ ಸುಧಾರಣೆಗಳ ತತ್ವಗಳನ್ನು ಭಾರತೀಯರು ಅನುಸರಿಸುವಂತೆ ಮಾಡಿ, ಏಕತೆಯ ದೃಷ್ಟಿಯಿಂದ ಭಾರತಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ. ಅವರು ಅದ್ವೈತ ಸಿದ್ಧಾಂತ ಮತ್ತು ಉಪನಿಷತ್ತಿನ ಅರ್ಥವನ್ನು ದೇಶಾದ್ಯಂತ ಪ್ರಚಾರ ಮಾಡಿದರು. ಭಾರತದ ನಾಲ್ಕು ದಿಕ್ಕುಗಳಲ್ಲಿ ನಾಲ್ಕು ಶಾರದಾ ಪೀಠಗಳನ್ನು ಸ್ಥಾಪಿಸಿದವರು. ಇಂತಹ ಮಹಾತ್ಮರ ಜೀವನ ಚರಿತ್ರೆಯನ್ನು ಮಕ್ಕಳಿಗೆ ಶಾಲಾ ಪಠ್ಯಗಳ ಮೂಲಕ ತಿಳಿಸುವುದು ಬಹು ಮುಖ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು.


ಹೆಬ್ಬಳ್ಳಿಯ ಶ್ರೀ ಬ್ರಹ್ಮ ಚೇತನ್ಯ ಆಶ್ರಮದ ದತ್ತಾವಧೂತರು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿ, ಆದಿ ಜಗದ್ಗುರು ಶ್ರೀ ಶಂಕರಾಚಾರ್ಯರು 8ನೇ ಶತಮಾನದಲ್ಲಿ ಭಾರತದಲ್ಲಿ ಜನಿಸಿದವರು. ಅವರು ಅತ್ಯಂತ ಪ್ರಮುಖ ವೇದಾಂತ ತತ್ವಜ್ಞಾನಿಗಳಲ್ಲಿ ಒಬ್ಬರಾಗಿದ್ದಾರೆ. ಶಂಕರಾಚಾರ್ಯರು ಅದ್ವೈತ ವೇದಾಂತ ತತ್ವವನ್ನು ಬೋಧಿಸಿ, ಏಕಮೇವಾದ್ವಿತೀಯಂ ಎಂಬ ತತ್ವವನ್ನು ಸಾರಿದರು. ಅವರು ಬೋಧಿಸಿದ ತತ್ವವು ಜ್ಞಾನ, ಭಕ್ತಿ ಮತ್ತು ಧ್ಯಾನದ ಮಹತ್ವವನ್ನು ಒತ್ತಿ ಹೇಳುತ್ತವೆ ಎಂದು ಹೇಳಿದರು.

ಧಾರವಾಡ ಸಾಹಿತಿ ಡಾ. ಭಾರತಿ ಹೆಗಡೆ ಅವರು ಶ್ರೀ ಶಂಕರಾಚಾರ್ಯರ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಾಜಿ ಮಹಾಪೌರ ಹೆಚ್.ವಿ. ಡಂಬಳ, ಬ್ರಾಹ್ಮಣ ಸಮಾಜದ ಅಧ್ಯಕ್ಷ ಹಾಗೂ ವಕೀಲ ಆರ್.ಡಿ. ಕುಲಕರ್ಣಿ, ಆಲೂರ ವೆಂಕಟರಾವ್ ಟ್ರಸ್ಟ್‌ನ ಸದಸ್ಯ ಡಾ. ದೀಪಕ ಆಲೂರ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಮಂಜುನಾಥ ಭೋವಿ, ಮಾಜಿ ಮಹಾಪೌರ ಪೂರ್ಣಾ ಪಾಟೀಲ ವೇದಿಕೆಯಲ್ಲಿದ್ದರು.

ವಿದೂಷಿ ಅಂಜಲಿ ಮೆಹೆಂದಳೆ ಮತ್ತು ವೃಂದದವರು ಹಾಗೂ ವೀಣಾ ಕದರಮಂಡಲಗಿ ಮತ್ತು ವೃಂದದವರು ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ರವಿ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಪ್ರಮುಖರು, ಶಂಕರಾಚಾರ್ಯರ ಅನುಯಾಯಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಮಾಡಳ್ಳಿ ಸರಕಾರಿ ಪ್ರೌಢಶಾಲೆಯ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮಾಡಳ್ಳಿ ಗ್ರಾಮದ ಶ್ರೀ ಎನ್.ಜಿ. ಪಾಟೀಲ ಸರಕಾರಿ ಹೈಸ್ಕೂಲ್ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ. ಶಾಲೆಯ ಒಟ್ಟು ಫಲಿತಾಂಶ ಶೇ.90.62 ಆಗಿದ್ದು, 6 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 15 ಪ್ರಥಮ ಹಾಗೂ 7 ವಿದ್ಯಾರ್ಥಿಗಳು ದ್ವಿತೀಯ ವರ್ಗದಲ್ಲಿ ಪಾಸಾಗಿದ್ದಾರೆ.

ಶಾಲೆಯ ಸೃಷ್ಟಿ ಪಾಟೀಲ ಶೇ.97.92, ಆಯೇಶಾಬಾನು ನದಾಫ್ ಶೇ.93.76, ನಿವೇದಿತಾ ಕೊಟಗಿ ಶೇ.92.32, ಅರ್ಚನಾ ಮಣ್ಣನವರ ಶೇ.91.52 ಹಾಗೂ ಸಮೀನಾ ಪರೀಟ್ 90.88 ಅಂಕ ಗಳಿಸಿದ್ದಾರೆ.

# ಕಣವಿ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಕಣವಿ ಸರ್ಕಾರಿ ಪ್ರೌಢಶಾಲೆ ಶಾಲೆಯ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದಿದ್ದಾರೆ. ಶಾಲೆಯ ಫಲಿತಾಂಶ ಶೇ. 78 ಆಗಿದ್ದು, 3 ವಿದ್ಯಾರ್ಥಿಗಳು ಉನ್ನತ ದರ್ಜೆಯಲ್ಲಿ, 28 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ ತೇರ್ಗಡೆ ಹೊಂದಿದ್ದಾರೆ. ಮಲ್ಲಪ್ಪ ಶರಣಪ್ಪ ಬೋಳನವರ (ಶೇ. 96.8) ಪ್ರಥಮ, ಲಕ್ಷ್ಮೀ ಗಾರವಾಡ (ಶೇ. 91.84) ದ್ವಿತೀಯ ಮತ್ತು ರಂಜಿತಾ ಕಣವಿ (ಶೇ. 88.16) ತೃತಿಯ ಸ್ಥಾನ ಪಡೆದು ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತಂದಿದ್ದಾರೆ.



ಸಾಧಕ ವಿದ್ಯಾರ್ಥಿಗಳನ್ನು ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷರು ಮತ್ತು ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರು, ಊರಿನ ಹಿರಿಯರು ಮತ್ತು ಶಿಕ್ಷಣ ಪ್ರೇಮಿಗಳು, ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು ಅಭಿನಂದಿಸಿದ್ದಾರೆ.

# ಐವರು ಮಹಿಳೆಯರ ತಾಳಿ ಸರ ಕಿತ್ತೊಯ್ದ ಕಳ್ಳರು..!



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಸರಗಳ್ಳರ ಗ್ಯಾಂಗ್ ಫುಲ್ ಆ್ಯಕ್ಟೀವ್ ಆಗಿದ್ದು, ಒಂದೇ ದಿನ ಐದು ಜನ ಮಹಿಳೆಯರ ತಾಳಿಸರ ಕಿತ್ತುಕೊಂಡು ಖದೀಮರು ಎಸ್ಕೇಪ್ ಆಗಿರುವ ಘಟನೆ ಗದಗ ಜಿಲ್ಲೆಯ ಲಕ್ಷ್ಮೇಶ್ವರ ಬಸ್ ನಿಲ್ದಾಣದಲ್ಲಿ ಜರುಗಿದೆ.

ಲಕ್ಷ್ಮೇಶ್ವರದಿಂದ ಅಕ್ಕಿಗುಂದ ಗ್ರಾಮಕ್ಕೆ ಹೋಗಲು ಬಸ್ ನಿಲ್ದಾಣಕ್ಕೆ ಬಂದಿದ್ದ ಕೀರ್ತನ ಕೊಡ್ಲಿ ಎಂಬ ಮಹಿಳೆ ಸೇರಿ ಐದು ಮಹಿಳೆಯ ಚಿನ್ನದ ತಾಳಿ ಸರ ಕದ್ದು ಕಳ್ಳರು ಎಸ್ಕೇಪ್ ಆಗಿದ್ದಾರೆ. ಅಕ್ಕಿಗುಂದ ಗ್ರಾಮಕ್ಕೆ ಹೋಗಲು ಬಸ್ ಹತ್ತುವಾಗ ಕಳ್ಳರು ಕೈಚಳಕ ತೋರಿದ್ದಾರೆ. ಕಳ್ಳರ ಕೃತ್ಯದಿಂದ ಕೊರಳಲ್ಲಿ ತಾಳಿ ಇಲ್ಲದೆ ಮಹಿಳೆಯರು ಕಂಗಾಲಾಗಿದ್ದಾರೆ.

ಬಸ್ ನಿಲ್ದಾಣದಲ್ಲಿ ಪೊಲೀಸ್ ಕಾವಲು ನಡುವೆಯೂ ಕಳ್ಳರು ಈ ಕೃತ್ಯ ಎಸಗಿದ್ದಾರೆ. ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

# ಬೆಂಕಿ ಅವಘಡ: ಸುಟ್ಟು ಕರಕಲಾದ ಬೇಕರಿ, 25 ಲಕ್ಷಕ್ಕೂ ಹೆಚ್ಚು ಹಾನಿ!

**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಂಕಿ ಅವಘಡದಿಂದ ಬೇಕರಿ ಒಂದು ಸುಟ್ಟು ಕರಕಲಾಗಿರುವ ಘಟನೆ ಗದಗ ಜಿಲ್ಲೆ ಮುಂಡರಗಿ ಪಟ್ಟಣದಲ್ಲಿ ಶುಕ್ರವಾರ ಮಧ್ಯರಾತ್ರಿ ಜರುಗಿದೆ. ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಬೆಂಕಿ ಹೊತ್ತಿರುವ ಶಂಕೆ ವ್ಯಕ್ತವಾಗಿದೆ.

ಪಟ್ಟಣದ ಬಸ್ ನಿಲ್ದಾಣದ ಎದುರಿನ ನ್ಯೂ ಮಹಾಂತೇಶ ಬೇಕರಿಯಲ್ಲಿ ಈ ಅವಘಡ ಸಂಭವಿಸಿದ್ದು, ಅಪಾರ ಮೌಲ್ಯದ ತಿನಿಸು ಪದಾರ್ಥಗಳು ಸುಟ್ಟು ಭಸ್ಮವಾಗಿದೆ. ಮಾಹಿತಿ ಆಧರಿಸಿ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸಲು ಹರಸಾಹಸ ಪಟ್ಟಿದ್ದಾರೆ. ಘಟನೆಯಲ್ಲಿ ಅಂದಾಜು ಇಪ್ಪತ್ತೈದು ಲಕ್ಷಕ್ಕೂ ಹೆಚ್ಚು ಹಾನಿ ಆಗಿರುವುದು ಮೇಲ್ನೋಟಕ್ಕೆ ತಿಳಿದು ಬಂದಿದೆ.


ಸ್ಥಳಕ್ಕೆ ತಹಶೀಲ್ದಾರ ಪಿ.ಎಸ್. ಯರ್ರಿಸ್ವಾಮಿ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಮುಂಡರಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಜರುಗಿದೆ.

# ಸಿದ್ಧಲಿಂಗ ನಗರ ಪ್ರೌಢಶಾಲೆಯ ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸಿದ್ಧಲಿಂಗ ನಗರದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಸ್ಫೂರ್ತಿ ನಿಂಗಪ್ಪ ಉಡಚಗೊಂಡ ಶೇ. 96 ಅಂಕ ಪಡೆಯುವ ಮೂಲಕ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಲಕ್ಷ್ಮೀ ಅಶೋಕ್ ನಲೂಡಿ ಶೇ. 89.92 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಕೀರ್ತಿ ಶೇಖಪ್ಪ ನಾಯ್ಕರ ಶೇ. 86.08 ಅಂಕಗಳೊಂದಿಗೆ ಶಾಲೆಗೆ ತೃತೀಯ ಸ್ಥಾನ ಪಡೆದಿದ್ದಾಳೆ.



4 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 49 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ, 26 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿ, 7 ವಿದ್ಯಾರ್ಥಿಗಳು ತೃತೀಯ ಶ್ರೇಣಿ ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿ ಶಾಲೆಗೆ ಕೀರ್ತಿಯನ್ನು ತಂದಿದ್ದಾರೆ. ಒಟ್ಟಾರೆ ಶಾಲೆಯ ಫಲಿತಾಂಶ ಪ್ರತಿಶತ ಶೇ. 63.23 ಆಗಿದೆ. ವಿದ್ಯಾರ್ಥಿಗಳ ಸಾಧನೆಗೆ ಎಸ್.ಡಿ.ಎಂ.ಸಿ. ಅಧ್ಯಕ್ಷರು, ಸಾರ್ವಜನಿಕ ಶಿಕ್ಷಣ ಇಲಾಖೆ ಅಧಿಕಾರಿಗಳು, ಸರ್ವ ಪದಾಧಿಕಾರಿಗಳು, ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ ಮುಂದಿನ ಭವಿಷ್ಯಕ್ಕೆ ಶುಭ ಹಾರೈಸಿದ್ದಾರೆ.

# ಸಮೀಕ್ಷೆ ಕಾರ್ಯದ ಸಹಾಯವಾಣಿ ಆರಂಭ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗದಿಂದ ಪರಿಶಿಷ್ಟ ಜಾತಿ ಒಳ ಮೀಸಲಾತಿ ಕುರಿತು ದತ್ತಾಂಶಗಳನ್ನು ಸಂಗ್ರಹಿಸಲು ಜಿಲ್ಲೆಯಲ್ಲಿ ಮೇ 5ರಿಂದ ಮೇ 17, 2025ರವರೆಗೆ ಮನೆ ಮನೆಗೆ ತೆರಳಿ ಸಮೀಕ್ಷಾ (ಗಣತಿ) ಕಾರ್ಯ ಕೈಗೊಳ್ಳಲಾಗುತ್ತಿದೆ. ಈ ಕಾರ್ಯಕ್ಕೆ ಜಿಲ್ಲೆಯ ಶಿಕ್ಷಕರನ್ನು ಹಾಗೂ ಇತರರನ್ನು ನೇಮಿಸಲಾಗಿದ್ದು, ಸಮೀಕ್ಷೆ ಅವಧಿಯಲ್ಲಿ ಸಮೀಕ್ಷೆಗೆ ಬೇಕಾದ ಅಗತ್ಯ ಮಾಹಿತಿಯನ್ನು ಒದಗಿಸಿ, ಸಹಕರಿಸುವಂತೆ ಜಿಲ್ಲಾಧಿಕಾರಿಗಳು ಸಂಬಂಧಿಸಿದವರಲ್ಲಿ ಕೋರಿದ್ದಾರೆ.



ಸಮೀಕ್ಷೆಗೆ ಸಂಬಂಧಿಸಿದಂತೆ ಕ್ಷೇತ್ರ ಮಟ್ಟದಲ್ಲಿ ಸಮೀಕ್ಷೆದಾರರಿಗೆ ಮತ್ತು ಸಾರ್ವಜನಿಕರಿಗೆ ಗೊಂದಲ, ಸಮಸ್ಯೆಗಳು ಉಂಟಾದಲ್ಲಿ ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ದಿನದ 24 ಗಂಟೆ ಕಾರ್ಯ ನಿರ್ವಹಿಸುವ ಕಂಟ್ರೋಲ್ ರೂಮ್ ತೆರೆಯಲಾಗಿದ್ದು, ಅಲ್ಲಿನ ಸಹಾಯವಾಣಿ ಸಂಖ್ಯೆ: 0836-2244001ಗೆ ಕರೆ ಮಾಡಿ, ಮಾಹಿತಿ ಪಡೆಯಬಹುದೆಂದು ಅವರು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.


# ಆದ್ಯತೆ ಮೇರೆಗೆ 'ದುಡಿಯೋಣ ಬಾ'

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಬೇಸಿಗೆ ಅವಧಿಯಲ್ಲಿ ತಾಲೂಕಿನ ಗ್ರಾಮೀಣ ಪ್ರದೇಶದ ಜನರಿಗೆ ನಿರಂತರವಾಗಿ ಕೆಲಸ ಒದಗಿಸುವ ಉದ್ದೇಶದಿಂದ 'ದುಡಿಯೋಣ ಬಾ' ಅಭಿಯಾನವನ್ನು ಆದ್ಯತೆ ಮೇರೆಗೆ ಹಮ್ಮಿಕೊಂಡಿದೆ ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ ಹೇಳಿದರು.

ಅವರು ಶನಿವಾರ ಶಿರಹಟ್ಟಿಯ ತಾ.ಪಂ ಕಚೇರಿಯಲ್ಲಿ ದುಡಿಯೋಣ ಬಾ ಅಭಿಯಾನದ ಕುರಿತು ಮಾಹಿತಿ ನೀಡಿದರು.

ಇದುವರೆಗೆ ನರೇಗಾ ಯೋಜನೆಯಲ್ಲಿ ಒಳಗೊಳ್ಳದೆ ಇರುವ ಕುಟುಂಬಗಳನ್ನು ಸಮೀಕ್ಷೆ ಮಾಡಿ ಅರ್ಹರಿಗೆ ಉದ್ಯೋಗ ಚೀಟಿ ವಿತರಿಸಲು ಆದ್ಯತೆ ನೀಡಲಾಗುವುದು. ಮಹಿಳಾ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಯೋಜನೆಯ ಕುರಿತು ಅರಿವು ಮೂಡಿಸಿ, ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಮಾಡುವುದು, ಯೋಜನೆಯಿಂದ ಹೊರಗುಳಿದ ದುರ್ಬಲ ಕುಟುಂಬಗಳನ್ನು ಗುರುತಿಸಿ, ಯೋಜನೆಯ ಸೌಲಭ್ಯಗಳನ್ನು ದೊರಕಿಸಿ ಕೊಡಲು ಒತ್ತು ನೀಡಲಾಗಿದೆ. ಯೋಜನೆಯಡಿ ಗ್ರಾಮೀಣ ಜನರಿಗೆ ಬೇಸಿಗೆ ಅವಧಿಯಲ್ಲಿ ನಿರಂತರವಾಗಿ ಕೆಲಸ ಒದಗಿಸುವುದು ಮತ್ತು ಸ್ವಾವಲಂಬಿಗಳಾಗಿ ಬದುಕುವಂತೆ ಮಾಡುವುದು ಅಭಿಯಾನದ ಉದ್ದೇಶವಾಗಿದೆ.




ಅರ್ಹ ಫಲಾನುಭವಿಗಳಿಗೆ ವೈಯಕ್ತಿಕ ಆಸ್ತಿಗಳನ್ನು ಸೃಜನೆ ಮಾಡುವ ಮೂಲಕ ಪರ್ಯಾಯ ಉದ್ಯೋಗ ಅವಕಾಶಗಳನ್ನು ಸೃಷ್ಟಿಸುವುದು, ಅಂಗವಿಕಲರು, ಮಹಿಳೆಯರು, ಹಿರಿಯ ನಾಗರಿಕರು, ಮಂಗಳ ಮುಖಿಯರು ಸೇರಿದಂತೆ ದುರ್ಬಲ ವರ್ಗಗಳಿಗೆ ಆದ್ಯತೆಯ ಮೇರೆಗೆ ಜಾಬ್ ಕಾರ್ಡ್ ಮತ್ತು ಕೆಲಸ ಒದಗಿಸುವುದು ಸಹ ಅಭಿಯಾನದ ಭಾಗವಾಗಿದೆ.

ಸ್ವ-ಸಹಾಯ ಸಂಘದ ಮಹಿಳಾ ಸದಸ್ಯರನ್ನು ಒಳಗೊಂಡು ಕಾಯಕ ಸಂಘಗಳನ್ನು ರಚನೆ ಮಾಡುವುದು ಮತ್ತು ಮಹಿಳಾ ಕಾಯಕ ಬಂಧುಗಳನ್ನು ನೇಮಿಸಿಕೊಂಡು 2025-26ನೇ ಸಾಲಿನಲ್ಲಿ ತಾಲೂಕಿನಲ್ಲಿ ಮಹಿಳಾ ಭಾಗವಹಿಸುವಿಕೆ ಪ್ರಮಾಣವನ್ನು ಶೇ. 60ರಷ್ಟು ಪ್ರಗತಿ ಸಾಧಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

# ಶ್ರೀ ಶಂಕರಾಚಾರ್ಯ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಐತಿಹಾಸಿಕ ಶ್ರೀ ತ್ರಿಕೂಟೇಶ್ವರ ದೇವಸ್ಥಾನದಲ್ಲಿ ಅದ್ವೈತ ಪ್ರಸಾರ ಪರಿಷತ್ತಿನ ವತಿಯಿಂದ ಶ್ರೀ ಶಂಕರಾಚಾರ್ಯ ಜಯಂತಿಯನ್ನು ಆಚಾರ್ಯ ಶಂಕರರಿಗೆ ಪಂಚಾಮೃತ ಅಭಿಷೇಕ, ಅಷ್ಟೋತ್ತರ ಪೂಜೆ ಸಲ್ಲಿಸುವುದರೊಂದಿಗೆ ಆಚರಿಸಲಾಯಿತು.

ಕ್ಷೇತ್ರದ ಅಧಿದೇವತೆ ಶ್ರೀ ಸರಸ್ವತಿ ಹಾಗೂ ಶಂಕರಾಚಾರ್ಯರಿಗೆ ಪ್ರಧಾನ ಅರ್ಚಕರಾದ ರಾಮಣ್ಣ ಪೂಜಾರ ಹಾಗೂ ರಮೇಶಭಟ್ಟ ಪೂಜಾರ ಇವರು ಪೂಜಾ ಕಾರ್ಯವನ್ನು ನೇರವೇರಿಸಿದರು. ಅದ್ವೈತ ಪ್ರಸಾರ ಪರಿಷತ್ತಿನ ಅಧ್ಯಕ್ಷರಾದ ರಾಮಚಂದ್ರ ಮೋನೆಯವರು ಶಂಕರಾಚಾರ್ಯರ ಸಾಧನೆ ಹಾಗೂ ಅವರು ವೈದಿಕ ಸನಾತನ ಧರ್ಮವನ್ನು ಹೇಗೆ ರಕ್ಷಿಸಿದರು, ಸದ್ಯದ ಕಲುಷಿತ ಸಮಾಜಕ್ಕೆ ದ್ವೇಷಮುಕ್ತ ಸಾಮರಸ್ಯ ಜೀವನ ನಡೆಸಲು 8ನೇ ಶತಮಾನದಲ್ಲಿಯೇ ಸುಲಭ ಮಾರ್ಗ ತೋರಿಸಿದ್ದರು ಎಂದು ತಿಳಿಸಿದರು. ಗಣಪತಿ ಕೌಜಲಗಿ ಸ್ವಾಗತಿಸಿದರೆ, ರವಿ ಪೂಜಾರ ವಂದನಾರ್ಪಣೆ ಮಾಡಿದರು.



ಕಾರ್ಯಕ್ರಮದಲ್ಲಿ ಪಾಂಡುರಂಗ ಭಟ್ಟ ಪೂಜಾರ, ವಿಶಾಲ ಜೋಶಿ, ಅಕ್ಷಯ ಅಲಬೂರ, ಶ್ರೀಕಾಂತ ಹಬೀಬ, ವೆಂಕಟೇಶ ಪೂಜಾರ, ದನಂಜಯ ಪೂಜಾರ, ಸುಧಾ ಮೋನೆ, ವಾಣಿ ಪೂಜಾರ, ತನ್ವೀ ಮೋನೆ ಮುಂತಾದವರು ಭಾಗವಹಿಸಿದ್ದರು.

# ಗದುಗಿನ ಜಾತ್ರೆಗಳಿಗೆ ವಿಶಿಷ್ಟ ಸ್ಥಾನವಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಪರಿಸರ ಧಾರ್ಮಿಕ ಕಾರ್ಯಕ್ರಮಗಳಿಗೆ ಹೆಸರಾಗಿದ್ದು, ವಿಶೇಷವಾಗಿ ಜಾತ್ರಾ ಕಾರ್ಯಕ್ರಮಗಳಿಗೆ ನಾಡಿನಾದ್ಯಂತ ಹೆಸರಾಗಿದೆ. ಉಸಗಿನಗಟ್ಟಿಯ ಗಂಜೀ ಬಸವೇಶ್ವರ ಜಾತ್ರೆಗೆ ಸಹ ಅದರದ್ದೇ ಆದ ಐತಿಹಾಸಿಕ ಮಹತ್ವವಿದೆ ಎಂದು ಉಸಿರು ಫೌಂಡೇಶನ್ ಅಧ್ಯಕ್ಷರು ಹಾಗೂ ಬಿಜೆಪಿ ಮುಖಂಡರಾದ ಶರಣ್ ಪಾಟೀಲ ನುಡಿದರು.

ಅವರು ನಗರದ ಉಸುಗಿನಗಟ್ಟಿಯ ಗಂಜೀ ಬಸವೇಶ್ವರ ಜಾತ್ರಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ದೇಶದ ಇತ್ತೀಚಿನ ಬೆಳವಣಿಗೆಗಳಲ್ಲಿ ಕಾಶ್ಮೀರ ಯುದ್ಧಭೂಮಿಯಾಗಿ ಪರಿವರ್ತನೆಯಾಗುತ್ತಿದ್ದು, ನಾವಿಲ್ಲಿ ರಂಗಭೂಮಿಯಂಥ ಮನರಂಜನಾ ಕಾರ್ಯಕ್ರಮದಲ್ಲಿ ತೊಡಗಿಕೊಂಡಿದ್ದರೆ ಅಲ್ಲಿ ಯೋಧರು ಯುದ್ಧಭೂಮಿಯಲ್ಲಿ ಕಾದಾಡಬೇಕಿದೆ ಎಂದರು. ಎಸ್.ಎಸ್.ಎಲ್.ಸಿ ಫಲಿತಾಶಂದ ಕುರಿತು ಮಾತನಾಡಿದ ಅವರು, ಗದಗ ಜಿಲ್ಲೆಯ ಫಲಿತಾಂಶದಲ್ಲಿ ಚೇತರಿಕೆ ಕಂಡುಬಂದಿದ್ದರೂ ಫಲಿತಾಂಶ ಸಮಾಧಾನಕರವಾಗಿಲ್ಲ. ಆದ್ದರಿಂದ ಮಕ್ಕಳಿಗೆ ವಿದ್ಯಾಭ್ಯಾಸದ ಮಹತ್ವದ ಕುರಿತು ಹೆಚ್ಚಿನ ಅರಿವು ಮೂಡಿಸಬೇಕು. ಮುಂದಿನ ದಿನಗಳಲ್ಲಿ ಉಸಿರು ಫೌಂಡೇಶನ್‌ನಿಂದ ಎಸ್.ಎಸ್.ಎಲ್.ಸಿಯಲ್ಲಿ ಶೇ.75ಕ್ಕಿಂತ ಹೆಚ್ಚಿನ ಅಂಕ ಪಡೆದ ಗದಗ ವಿದ್ಯಾರ್ಥಿಗಳಿಗೆ ಉಚಿತವಾಗಿ ವಿಶೇಷ ತರಬೇತಿ ನೀಡಲಾಗುವುದು ಎಂದರು.



ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಸಾನ್ನಿಧ್ಯ ವಹಿಸಿದ್ದರು. ಶಿವಾನಂದ ಪಲ್ಲೇದ, ಪ್ರಶಾಂತ ಶಾಬಾದಿಮಠ, ಈರಣ್ಣ ಕರಿಬಿಷ್ಠಿ, ಎಫ್.ವಿ. ಮರಿಗೌಡ್ರ, ಎಚ್.ಕೆ. ಮುಲ್ಲಾ, ಎಂ.ಎಸ್. ಕರಿಗೌಡ್ರ, ರವಿ ಕಮತರ ಸೇರಿದಂತೆ ಅನೇಕ ಗಣ್ಯರು ವೇದಿಕೆ ಮೇಲಿದ್ದರು. ಸಭಾ ಕಾರ್ಯಕ್ರಮದ ನಂತರ 'ಅಕ್ಕ ಅಂಗಾರ ತಂಗಿ ಬಂಗಾರ' ಸಾಮಾಜಿಕ ನಾಟಕ ಪ್ರದರ್ಶನ ಜರುಗಿತು.




ಗದುಗಿನ ಸರ್ಕಾರಿ ನೌಕರರ ಭವನದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿ ರವಿ ಗುಂಜೀಕರರ ನಿವೃತ್ತಿಯ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು. ರವಿ ಗುಂಜೀಕರರ ಅಭಿಮಾನಿಗಳು ಹಾಗೂ ಸಾರ್ವಜನಿಕರು ಸೇರಿದಂತೆ 50ಕ್ಕೂ ಹೆಚ್ಚು ಜನರು ರಕ್ತದಾನ ಮಾಡಿದರು. ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ಡಿ.ಎಚ್.ಓ ಡಾ. ಎಸ್.ಎಸ್. ನೀಲಗುಂದ, ಡಾ. ಅನಂತ ಶಿವಪೂರ, ಡಾ. ವೀರೇಶ ಹಂಚಿನಾಳ, ಅಭಿಮಾನಿ ಸಂಘದ ಅಧ್ಯಕ್ಷ ಅರುಣಕುಮಾರ ಹಿರೇಮಠ, ಉಪಾಧ್ಯಕ್ಷ ಎಸ್.ಆರ್. ಹಿರೇಮಠ, ಡಿ.ಎಸ್. ತಳವಾರ, ಕಾರ್ಯದರ್ಶಿ ಕೆ.ಎಫ್. ಹಳ್ಯಾಳ, ಆರ್.ಎಂ. ನಿಂಬನಾಯ್ಕರ್, ಮಂಜು ಮಾನೆ, ಶಿವಾಜಿ ಪಾವನ ಮುಂತಾದವರಿದ್ದರು.

ಜಾತ್ರೆಯ ನಿಮಿತ್ತ ಸಾಂಪ್ರದಾಯಿಕ ಕಾರ್ಯಕ್ರಮಗಳ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು

# ಶ್ರೀ ಸೋಮೇಶ್ವರ ಜಾತ್ರೆ ಮೇ. 7ರಿಂದ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಸೋಮೇಶ್ವರ ದೇವಸ್ಥಾನದ ಜಾತ್ರಾ ಮಹೋತ್ಸವವು ಮೇ.6ರಿಂದ 4 ದಿನಗಳ ಕಾಲ ನಡೆಯಲಿದೆ. ಜಾತ್ರೆಯ ನಿಮಿತ್ತ ಸಾಂಪ್ರದಾಯಿಕ ಕಾರ್ಯಕ್ರಮಗಳ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಸೋಮೇಶ್ವರ ಜಾತ್ರಾ ಕಮಿಟಿ ಅಧ್ಯಕ್ಷ ಕುಬೇರಪ್ಪ ಮಹಾಂತಶೆಟ್ಟರ ಹೇಳಿದರು.



ಈ ಕುರಿತು ದೇವಸ್ಥಾನದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಜಾತ್ರೆಯ ನಿಮಿತ್ತ ಮೇ. 6ರಂದು ಸಂಜೆ 7 ಗಂಟೆಗೆ ಸುಮಂಗಲೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಮತ್ತು ಶ್ರೀ ಲಕ್ಷ್ಮೀದೇವರ ಪೂಜೆ ರಥದ ಹತ್ತಿರ ನೆರವೇರಲಿದೆ. ಇತಿಹಾಸ ಪ್ರಸಿದ್ಧ ದೇವಸ್ಥಾನದ ಜಾತ್ರೆಯ ರಥೋತ್ಸವ ಮೇ. 7ರಂದು ಸಂಜೆ 5.30 ಗಂಟೆಗೆ ಸಕಲ ವಾದ್ಯ ವೈಭವದೊಂದಿಗೆ ನಡೆಯಲಿದೆ. ಮೇ. 8ರಂದು ಸಂಜೆ 5.30 ಗಂಟೆಗೆ ಕಡುಬಿನ ಕಾಳಗ ಹಾಗೂ ಮೇ. 9ರಂದು 7 ಗಂಟೆಗೆ ದೇವರ ಓಕಳಿ ಕಾರ್ಯಕ್ರಮ ಜರುಗಲಿದೆ ಎಂದು ತಿಳಿಸಿದರು.

ಸೇವಾ ಟ್ರಸ್ಟ್ ಕಮಿಟಿ ನಿಕಟಪೂರ್ವ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ, ಪೂರ್ಣಾಜಿ ಖರಾಟೆ ಮಾತನಾಡಿ, ವಿವಿಧ ಭಾಗಗಳಿಂದ ಬರುವ ಭಕ್ತರಿಗೆ ಅನುಕೂಲವಾಗುವಂತೆ ಕುಡಿಯುವ ನೀರು, ಪಾರ್ಕಿಂಗ್ ವ್ಯವಸ್ಥೆ, ಪ್ರಸಾದ ಸೇರಿದಂತೆ ಯಾವುದೇ ಸಮಸ್ಯೆಯಾಗದಂತೆ ವಿಶೇಷ ಕಾಳಜಿ ವಹಿಸಲಾಗಿದ್ದು, ಜಾತ್ರಾ ಕಮಿಟಿ, ಅರ್ಚಕರ ಕಮಿಟಿ, ಟ್ರಸ್ಟ್ ಕಮಿಟಿ ಸೇರಿದಂತೆ ಯುವಕರು, ಹಿರಿಯರು ಸೇರಿ ಜಾತ್ರೆಯನ್ನು ಯಶಸ್ವಿಯಾಗಿ ನಿಭಾಯಿಸಲು ಸಿದ್ಧರಾಗಿದ್ದಾರೆ. ನಮ್ಮ ಹೆಮ್ಮೆಯ ದೇವಸ್ಥಾನದ ಜಾತ್ರೆಗೆ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಬೇಕು ಎಂದು ಮನವಿ ಮಾಡಿದರು. ಅರ್ಚಕರ ಸಮಿತಿ ಅಧ್ಯಕ್ಷ ವಿ.ಎಲ್. ಪೂಜಾರ, ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ನೂತನ ಅಧ್ಯಕ್ಷ ಗುರುರಾಜ ಪಾಟೀಲಕುಲಕರ್ಣಿ ಮಾತನಾಡಿ, ಜಾತ್ರೆಯ ಸಿದ್ಧತೆಗಳ ಜೊತೆಗೆ ಈ ಬಾರಿ ಜನರಿಗೆ ನೇರವಾಗಿ ಸೋಮೇಶ್ವರನ ದರ್ಶನಕ್ಕೆ ಪೂರ್ವ ಬಾಗಿಲಿನಿಂದ ಬಿಡುವ ವ್ಯವಸ್ಥೆ ಮಾಡಲಾಗಿದೆ. ಪೂರ್ವ ಬಾಗಿಲಿನಿಂದ ಬಂದು ಉತ್ತರ ಮತ್ತು ದಕ್ಷಿಣ ಬಾಗಿಲುಗಳ ಮೂಲಕ ಹೊರ ಹೋಗುವಂತೆ ವ್ಯವಸ್ಥೆ ಮಾಡುವ ಉದ್ದೇಶವಿದ್ದು, ಜನರು ಸಹಕಾರದಿಂದ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದರು.

ಈ ಸಂದರ್ಭದಲ್ಲಿ ಸಿದ್ದನಗೌಡ ಬಳ್ಳೊಳ್ಳಿ, ಶಿವಯೋಗಿ ಅಂಕಲಕೋಟಿ, ಕಾಶಪ್ಪ ಮುಳಗುಂದ, ಎನ್.ಆರ್. ಸಾತಪೂತೆ, ಪ್ರಕಾಶ ಮುಳಗುಂದ, ಮಯೂರಗೌಡ ಪಾಟೀಲ, ಸುರೇಶ ರಾಚನಾಯ್ಕರ್, ವೀರಣ್ಣ ಮುಳಗುಂದ, ಬಂಗಾರಪ್ಪ ಮುಳಗುಂದ, ಭರಮಣ್ಣ ಕೊಡ್ಲಿ ಸೇರಿದಂತೆ ಅನೇಕರಿದ್ದರು.

ಜಾತ್ರಾ ಮಹೋತ್ಸವದ ಅಂಗವಾಗಿ 7ರಿಂದ 9ರವರೆಗೆ ಮೂರು ದಿನಗಳ ಕಾಲ ಪ್ರಸಾದ ಸೇವೆ ನಡೆಯಲಿದೆ. ಅಲ್ಲದೆ ಶ್ರೀ ಸೋಮೇಶ್ವರನಿಗೆ ಪಂಚಾಮೃತ ಅಭಿಷೇಕ, ಕ್ಷೀರಾಭಿಷೇಕ, ರುದ್ರಾಭಿಷೇಕ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿದ್ದು, ಸಾವಾ ಕಾರ್ಯಗಳಿಗಾಗಿ ಅರ್ಚಕರನ್ನು ಸಂಪರ್ಕಿಸಬಹುದು ಎಂದು ಸಮಿತಿಯ ಪ್ರಕಟಣೆ ತಿಳಿಸಿದೆ.

# ಆರ್‌ಎಂಎಸ್‌ಎ ಪ್ರೌಢಶಾಲೆ ವಿದ್ಯಾರ್ಥಿಗಳ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

2024/25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ)ಗೆ ಶೇ.68 ಫಲಿತಾಂಶ ಬಂದಿದೆ.




ರೇಣುಕಾ ಕಮ್ಮಾರ 562 ಅಂಕ ಪಡೆದು ಪ್ರಥಮ, ಹರೀಶ ಕೆಂಚನಾಯ್ಕರ 539 ಅಂಕ ಪಡೆದು ದ್ವಿತೀಯ, ಇಕ್ಬಾಲ್ ಯಳವತ್ತಿ 515 ಅಂಕ ಪಡೆದು ತೃತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿಗಳಿಗೆ ಶಾಲಾ ಪ್ರಧಾನ ಗುರುಗಳು, ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ಅಭಿನಂದಿಸಿದ್ದಾರೆ.

# ಜ. ತೋಂಟದಾರ್ಯ ಪ್ರೌಢಶಾಲೆಗೆ ಉತ್ತಮ ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಜಗದ್ಗುರು ತೋಂಟದಾರ್ಯ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದಿದ್ದಾರೆ.



ಸಂಜನಾ ಸಣ್ಣಪ್ಯಾಟಿ 557 (ಶೇ. 89.12) ಪ್ರಥಮ, ಭಾಗ್ಯ ರಾಘಣ್ಣವರ 542 (ಶೇ. 86.72) ದ್ವಿತೀಯ ಹಾಗೂ ರಂಜಾನಬಿ ಹೊಂಬಳ 528 (ಶೇ. 84.48) ತೃತೀಯ ಸ್ಥಾನ ಪಡೆದಿದ್ದಾರೆ.

ಅಗ್ರ ಶ್ರೇಣಿಯಲ್ಲಿ 4, ಪ್ರಥಮ ದರ್ಜೆಯಲ್ಲಿ 24 ಹಾಗೂ ದ್ವಿತೀಯ ದರ್ಜೆಯಲ್ಲಿ 10, ತೃತೀಯ ದರ್ಜೆಯಲ್ಲಿ 2 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಒಟ್ಟು ಶಾಲೆಯ ಫಲಿತಾಂಶ ಶೇ. 81.81 ಆಗಿದೆ. ಜಗದ್ಗುರು ತೋಂಟದ ಡಾ. ಸಿದ್ದರಾಮ ಮಹಾಸ್ವಾಮಿಗಳು, ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ, ಮುಖ್ಯೋಪಾಧ್ಯಾಯರು, ಗುರುವೃಂದ, ಗ್ರಾಮದ ಶಿಕ್ಷಣ ಪ್ರೇಮಿಗಳು, ಹಿರಿಯರು ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

ಜಾತಿ ವ್ಯವಸ್ಥೆ ನಿಂತ ನೀರಿನಂತೆ–ಮುಖ್ಯಮಂತ್ರಿ ಸಿದ್ದರಾಮಯ್ಯ

# ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಂವಿಧಾನ ರಕ್ಷಣೆ ಆದರೆ ನಮ್ಮ ಹಕ್ಕುಗಳೂ ರಕ್ಷಣೆಯಾಗುತ್ತವೆ. ಸಂವಿಧಾನ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ. ಸಂವಿಧಾನಕ್ಕೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಶನಿವಾರ ಯಲಹಂಕದಲ್ಲಿ 14 ಅಡಿಗಳ ಬಾಬಾ ಸಾಹೇಬ್ ಅಂಬೇಡ್ಕರ್ ಕಂಚಿನ ಪ್ರತಿಮೆಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ನಮ್ಮ ದೇಶ, ನಮ್ಮ ಸಮಾಜಕ್ಕೆ ಅವಶ್ಯವಾಗಿದ್ದಂತಹ ಅತ್ಯುತ್ತಮ ಸಂವಿಧಾನವನ್ನು ನೀಡಿದವರು ಬಾಬಾ ಸಾಹೇಬ್ ಅಂಬೇಡ್ಕರ್. ಈ ದೇಶದ ಸಾಮಾಜಿಕ ಪರಿಸ್ಥಿತಿ, ಜಾತಿ ವ್ಯವಸ್ಥೆ ಅಂಬೇಡ್ಕರ್ ಅವರಿಗೆ ಅರ್ಥ ಆದಷ್ಟು ಬೇರೆಯವರಿಗೆ ಆಗಿರಲಿಲ್ಲವೆಂದರೆ ಅದು ಅತಿಶಯೋಕ್ತಿಯಲ್ಲ.

ಜಾತಿ ವ್ಯವಸ್ಥೆ ಇದ್ದಷ್ಟೂ ಕಾಲ ಮೀಸಲಾತಿ ಇರಲೇಬೇಕು ಎಂಬುದನ್ನು ಅವರು ಬಲವಾಗಿ ನಂಬಿದ್ದರು ಎಂದರು.

ನಮ್ಮ ದೇಶದ ಜಾತಿ ವ್ಯವಸ್ಥೆಗೆ ಚಲನೆ ಇಲ್ಲ. ಆದರೆ ವರ್ಗಕ್ಕೆ ಚಲನೆಯಿದೆ. ನಮ್ಮ ಸಮಾಜದಲ್ಲಿ ಶ್ರೀಮಂತ ಬಡವನಾದರೂ, ಬಡವ ಶ್ರೀಮಂತನಾದರೂ ಕಡೆಯವರೆಗೂ ಉಳಿದು ಕೊಳ್ಳುವುದು ಹುಟ್ಟಿದ ಜಾತಿಯಲ್ಲಿ ಮಾತ್ರ. ಆದ್ದರಿಂದ ಈ ಜಾತಿ ವ್ಯವಸ್ಥೆ ನಿಂತ ನೀರಿನಂತೆ.

ಇದನ್ನು ಮನಗಂಡಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸ್ವಾತಂತ್ರ್ಯ ಯಶಸ್ಸನ್ನು ಕಾಣಬೇಕಾದರೆ ಈ ದೇಶದ ಅವಕಾಶ ವಂಚಿತರು, ಶೋಷಿತರು, ದೌರ್ಜನ್ಯಕ್ಕೆ ಒಳಗಾದವರಿಗೆಲ್ಲರಿಗೂ ಸಮಾನ ಅವಕಾಶಗಳು ದೊರೆತು ಅವರೆಲ್ಲರೂ ಸಾಮಾಜಿಕವಾಗಿ, ಆರ್ಥಿಕವಾಗಿ ಸಬಲರಾದಾಗ ಮಾತ್ರ ಸ್ವಾತಂತ್ರ್ಯಕ್ಕೆ ನಿಜವಾದ ಅರ್ಥ ಸಿಗುತ್ತದೆ ಎಂದು ಹೇಳಿದ್ದರು ಎಂದರು.

ಸ್ವಾತಂತ್ರ್ಯಾನಂತರ ಒಬ್ಬ ವ್ಯಕ್ತಿ , ಒಂದು ಮತ ಜಾರಿಗೆ ಬಂದಿದೆ . ಇದು ಈ ದೇಶದ ರಾಷ್ಟ್ರಪತಿಗಳಿಗೂ ಒಂದೇ. ಒಬ್ಬ ಪೌರಕಾರ್ಮಿಕನಿಗೂ ಒಂದೇ. ಬಸವಣ್ಣನವರು ಹೇಳಿದ್ದು ಇದನ್ನೇ. ಅಂಬೇಡ್ಕರ್ ಅವರು ಕೂಡಾ ಬಸವಣ್ಣನವರ ವಚನಗಳನ್ನು ಓದಿದ್ದರು ಎಂಬುದು ಅವರ ಬರಹಗಳಿಂದ ತಿಳಿದು ಬರುತ್ತದೆ. ಸಮಾಜದಲ್ಲಿ ಯಾವ ಕೆಲಸವೂ ಮೇಲೂ ಅಲ್ಲ, ಕೀಳೂ ಅಲ್ಲ. ಎಲ್ಲವೂ ಸಮಾನ ಎಂದೇ ಪ್ರತಿಪಾದಿಸಿದರು ಎಂದರು.

**ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ**

ಸಮಗ್ರ ಸಾಮಾಜಿಕ ವ್ಯವಸ್ಥೆ ಬದಲಾಗಬೇಕು. ಅಂಬೇಡ್ಕರ್ ದಲಿತರಾಗಿ ಹುಟ್ಟಿದರೂ ಎಲ್ಲರ ನಾಯಕರಾಗಿದ್ದರು. ಸಾಮಾಜಿಕ ನ್ಯಾಯದಿಂದ ವಂಚಿತರಾದವರೆಲ್ಲರ ನಾಯಕರಾಗಿದ್ದರು. ಈ ದೇಶದಲ್ಲಿ ಅವರು ಹುಟ್ಟಿರುವುದೇ ನಮಗೆ ಹೆಮ್ಮೆಯ ಸಂಗತಿ ಸಿಎಂ ಸಿದ್ದರಾಮಯ್ಯ ಹೇಳಿದರು. ಅಂಬೇಡ್ಕರ್ ವಿಚಾರಗಳು ಇಂದಿಗೂ ಪ್ರಸ್ತುತವಾಗಿವೆ ಪ್ರತಿಮೆಗಳು ಸಂಕೇತಗಳಾದರೂ, ಇವುಗಳಿಂದ ಅಂಬೇಡ್ಕರ್ ಅವರ ವಿಚಾರಗಳು ಇನ್ನಷ್ಟು ಪಸರಿಸಲಿ ಎಂದರು.

# ಕಾಮಗಾರಿಯ ಗುಣಮಟ್ಟಕ್ಕೆ ಆದ್ಯತೆ ನೀಡಿ



**■ವಿಜಯಸಾಕ್ಷಿ ಸುದ್ದಿ, ಡಂಬಳ**

ರಸ್ತೆ ಕಾಮಗಾರಿಯ ಗುಣಮಟ್ಟಕ್ಕೆ ಆದ್ಯತೆ ನೀಡಬೇಕು. ಜನಾನುರಾಗಿಯಾಗಿ ಅಭಿವೃದ್ಧಿ ಕೆಲಸಗಳನ್ನು ಮಾಡುತ್ತಿರುವ ಶಾಸಕ ಜಿ.ಎಸ್. ಪಾಟೀಲರು ತಾಂಡಾಗಳ ಅಭಿವೃದ್ಧಿಗೆ ಆದ್ಯತೆ ನೀಡಲು ಮುಂದಾಗಿರುವುದು ಸಂತೋಷ ತಂದಿದೆ ಎಂದು ಶಿವಾಜಿನಗರ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಾಂತವ್ವ ಗಣೇಶ ರಾಠೋಡ ಹೇಳಿದರು.

ಡಂಬಳ ಹೋಬಳಿ ಸಿಂಗಟರಾಯನಕೇರಿ ತಾಂಡಾ ಶಿವಾಜಿನಗರದಲ್ಲಿ ಲೋಕೋಪಯೋಗಿ ಇಲಾಖೆಯ ಅನುದಾನ 180 ಲಕ್ಷ ರೂಗಳ ವೆಚ್ಚದಲ್ಲಿ ಬೆಂಚಿ ರಸ್ತೆ 2 ಕಿ.ಮೀ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾ.ಪಂ ಮಾಜಿ ಅಧ್ಯಕ್ಷ ಲಕ್ಷ್ಮಣಸಿಂಗ ರಾಠೋಡ, ಗ್ರಾ.ಪಂ ಸದಸ್ಯರಾದ ಮೀರಾಬಾಯಿ ಪಾಂಡಪ್ಪ ಮೇಘಾವತ್, ಸರೋಜಾ ಪ್ರಕಾಶ ಪೂಜಾರ, ಮೀರವ್ವ ಲಮಾಣಿ, ಲಕ್ಷ್ಮಣ ಚೌಹಾಣ, ರಾಜಶೇಖರ ಪವಾರ, ಗ್ರಾಮದ ಹಿರಿಯರಾದ ದೇವಪ್ಪ ಹೋಬಪ್ಪ ನಾಯಕ, ಶಿವಪ್ಪ ಚನ್ನಪ್ಪ ರಾಠೋಡ, ಧರ್ಮಸಿಂಗ್ ರಾಮಪ್ಪ ರಾಠೋಡ, ಧರ್ಮಸಿಂಗ್ ಗುರುನಾಥ ರಾಠೋಡ, ಲಕ್ಷ್ಮಣ ನಾಯಕ, ದೇವಪ್ಪ ನಾಯಕ, ಗುತ್ತಿಗೆ ಕಾಮಗಾರಿಗಳ ಸಂಘದ ಜಿಲ್ಲಾ ಅಧ್ಯಕ್ಷ ಸಿದ್ದು ಪಾಟೀಲ, ಕಾಂಗ್ರೆಸ್ ಪಕ್ಷದ ಮುಖಂಡರಾದ ಗುರಣ್ಣ ನಾಯಕ, ತಾವರಪ್ಪ ಲಮಾಣಿ, ಶಂಕರ ಪೂಜಾರ, ಸುರೇಶ ಪವಾರ, ಶಿವಪ್ಪ ಲಮಾಣಿ, ರಾಜು ರಾಠೋಡ, ಮರಿಯಪ್ಪ ರಾಠೋಡ, ವಾಸು ಲಮಾಣಿ, ಅಪ್ಪಣ್ಣ ನಾಯಕ, ಉಮೇಶ ನಾಯಕ, ಚಂದ್ರಶೇಖರ ನಾಯಕ, ರಮೇಶ ನಾಯಕ, ಲೋಕಪ್ಪ ಲಮಾಣಿ, ಲಕ್ಷ್ಮಣ ಭೀಮಸಿಂಗ ಲಮಾಣಿ, ವಿಷ್ಣು ಪವಾರ್, ವಿಶ್ವ ನಾಯಕ, ಠಾಕ್ರಪ್ಪ ರಾಠೋಡ, ಗಣೇಶ ಚೌಹಾಣ, ಕುಬೇರಪ್ಪ ಲಮಾಣಿ ಇತರರು ಇದ್ದರು.

# ‘ದುಡಿಯೋಣ ಬಾ’ ಅಭಿಯಾನಕ್ಕೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮೀಣ ಜನರಿಗೆ ಆರ್ಥಿಕವಾಗಿ ಹೆಚ್ಚು ಸಹಾಯಕವಾಗಿರುವ ಉದ್ಯೋಗ ಖಾತ್ರಿ ಯೋಜನೆ ಕಾಮಗಾರಿಗಳು ಎಲ್ಲೆಡೆ ನಡೆಯುತ್ತಿದ್ದು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಬೇಸಿಗೆ ಕಾಲದಲ್ಲಿ ಮೇ 1ರಿಂದ ಜೂನ್ ಅಂತ್ಯದವರೆಗೆ ತಾಲೂಕಿನ ಗ್ರಾಮೀಣ ಭಾಗದ ಜನರಿಗೆ ನಿರಂತರವಾಗಿ ಕೆಲಸ ಒದಗಿಸುವ ಉದ್ದೇಶದಿಂದ ‘ದುಡಿಯೋಣ ಬಾ’ ಅಭಿಯಾನಕ್ಕೆ ಚಾಲನೆ ನೀಡಲಾಯಿತು.




ತಾಲೂಕಿನ ಗೋಜನೂರು, ಸೂರಣಗಿ, ರಾಮಗಿರಿ, ಬಟ್ಟೂರು, ದೊಡ್ಡೂರು, ಹುಲ್ಲೂರು, ಮಾಡಳ್ಳಿ, ಪು. ಬಡ್ನಿ, ಬಾಲೆಹೊಸೂರು, ಆದರಹಳ್ಳಿ, ಅಡರಕಟ್ಟಿ, ಗೋವನಾಳ, ಗ್ರಾಮ ಪಂಚಾಯಿತಿಗಳಲ್ಲಿ ಈಗಾಗಲೇ ಉದ್ಯೋಗ ಖಾತ್ರಿ ನಡಿಗೆ ಸಬಲತೆಯೆಡೆಗೆ ಅಭಿಯಾನದಡಿ ಸಾಮೂಹಿಕ ಕಂದಕ ಬದು ನಿರ್ಮಾಣ ಕಾಮಗಾರಿ ಪ್ರಾರಂಭವಾಗಿದೆ. ನಿರಂತರವಾಗಿ ಕೆಲಸ ನೀಡುವ ಉದ್ದೇಶದಿಂದ ಮೇ 1ರಿಂದ ಜೂನ್ 30ರವರೆಗೆ ದುಡಿಯೋಣ ಬಾ ಅಭಿಯಾನದ ಮೂಲಕ ಗ್ರಾಮೀಣ ಜನರಿಗೆ ಆರ್ಥಿಕ ಸದೃಢತೆಗಾಗಿ ನರೇಗಾದಡಿ ಕೆಲಸ ನೀಡಲಾಗುವುದು ಎಂದು ಕಾರ್ಯನಿರ್ವಾಹಕ ಅಧಿಕಾರಿ ಧರ್ಮರ ಕೃಷ್ಣಪ್ಪ ತಿಳಿಸಿದರು.

ನರೇಗಾದಡಿ ಪಾಲ್ಗೊಳ್ಳದೆ ಇರುವ ಕುಟುಂಬಗಳನ್ನು ಸಮೀಕ್ಷೆ ಮಾಡಿ ಅರ್ಹರಿಗೆ ಉದ್ಯೋಗ ಚೀಟಿ ವಿತರಿಸಲಾಗುವುದು. ನರೇಗಾ ಯೋಜನೆಯ ಕುರಿತು ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಯಲ್ಲಿ ಮಹಿಳಾ ಸ್ವಸಹಾಯ ಗುಂಪುಗಳ ಸದಸ್ಯರಿಗೆ ಅರಿವು ಮೂಡಿಸುವ ಮತ್ತು ಸಕ್ರಿಯವಾಗಿ ಪಾಲ್ಗೊಳ್ಳುವ ಉದ್ದೇಶದಿಂದ ಸ್ತ್ರೀ ಚೇತನ ಅಭಿಯಾನ ಹಮ್ಮಿಕೊಳ್ಳಲಾಗಿದೆ. ದುರ್ಬಲ ಕುಟುಂಬಗಳನ್ನು ಗುರುತಿಸಿ ಯೋಜನೆಯ ಸೌಲಭ್ಯಗಳನ್ನು ಒದಗಿಸಿಕೊಡಲು ಪ್ರಥಮ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

# ಕೋಟುಮಚಗಿ ಹೈಸ್ಕೂಲ್ ವಿದ್ಯಾರ್ಥಿಗಳ ಸಾಧನೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕೋಟುಮಚಗಿ ಸರಕಾರಿ ಪ್ರೌಢಶಾಲೆಯ 2025ರ ಎಸ್.ಎಸ್.ಎಲ್.ಸಿ ಫಲಿತಾಂಶ ಅತ್ಯುತ್ತಮವಾಗಿದೆ. ಪರೀಕ್ಷೆಗೆ ಹಾಜರಾಗಿದ್ದ 56 ವಿದ್ಯಾರ್ಥಿಗಳಲ್ಲಿ 41 ವಿದ್ಯಾರ್ಥಿಗಳು ಉತ್ತೀರ್ಣಗಿದ್ದಾರೆ.



ಶಾಲೆಯ ಫಲಿತಾಂಶ ಶೇ. 73.2 ಆಗಿದ್ದು, ವಿಜಯಲಕ್ಷ್ಮೀ ಶಂಕ್ರಪ್ಪ ಶಿಂಗ್ಟಾಲಕೇರಿ ಶೇ. ಸದರಿ 89(ಪ್ರಥಮ), ಐಶ್ವರ್ಯ ನೀಲಪ್ಪ ಹುಡೇದ ಶೇ. 87 (ದ್ವಿತೀಯ), ಯಲ್ಲಮ್ಮ ಸಿದ್ದಪ್ಪ ಶಿಂಗ್ಟಾಲಕೇರಿ ಶೇ. 86.8 (ತೃತೀಯ) ಸ್ಥಾನ ಪಡೆದುಕೊಂಡಿದ್ದಾರೆ.

ಸದರಿ ವಿದ್ಯಾರ್ಥಿಗಳಿಗೆ ಶಾಲೆಯ ಎಸ್.ಡಿ.ಎಮ್.ಸಿ ಪದಾಧಿಕಾರಿಗಳು, ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕ ಬಳಗದವರು ಅಭಿನಂದಿಸಿದ್ದಾರೆ.

# ಶಿಳ್ಳಿನರಿಗೆ ‘ಯುವ ರತ್ನ’ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಎಸ್‌ಎವಿ ಪ್ರೌಢಶಾಲೆಯ ಚಿತ್ರಕಲಾ ಶಿಕ್ಷಕ ರಮೇಶ ಶಿಳ್ಳಿನ ಇವರಿಗೆ ‘ಯುವ ರತ್ನ’ ಪ್ರಶಸ್ತಿ ದೊರಕಿದೆ.




ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರಿಗೆ ರಾಜ್ಯ ಮಟ್ಟದಲ್ಲಿ ಕೊಡಮಾಡುವ ಪ್ರಶಸ್ತಿ ಇದಾಗಿದ್ದು, ಕರ್ನಾಟಕ ಪ್ರೆಸ್‌ಕ್ಲಬ್ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಹಯೋಗದಲ್ಲಿ 2024–25ನೇ ಸಾಲಿನ ವಾರ್ಷಿಕ ಪ್ರಶಸ್ತಿಯನ್ನು ಶಿಳ್ಳಿನ್ ಅವರಿಗೆ ಶಿಕ್ಷಣ ಕ್ಷೇತ್ರದಲ್ಲಿನ ಸಾಧನೆಗಾಗಿ ನೀಡಲಾಗಿದೆ. ಬೆಂಗಳೂರಿನ ನಯನ ಸಭಾಂಗಣ ಕನ್ನಡ ಭವನದಲ್ಲಿ ಇತ್ತೀಚೆಗೆ ಪ್ರಶಸ್ತಿ ಪ್ರದಾನ ಸಮಾರಂಭ ನೆರವೇರಿತು.

ಪ್ರಶಸ್ತಿ ಪಡೆದ ಚಿತ್ರಕಲಾ ಶಿಕ್ಷಕ ರಮೇಶ ಶಿಳ್ಳಿನರನ್ನು ಸಂಸ್ಥೆಯ ಅಧ್ಯಕ್ಷರು ಹಾಗೂ ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿ, ಹರ್ಷ ವ್ಯಕ್ತಪಡಿಸಿದ್ದಾರೆ.

# ವಾರ್ಷಿಕೋತ್ಸವದ ನಿಮಿತ್ತ ದುರ್ಗಾ ಹೋಮ

■ ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಮಹೇಂದ್ರ ಸರ್ಕಲ್ ಹತ್ತಿರವಿರುವ ಶ್ರೀ ದುರ್ಗಾದೇವಿ ಗುಡಿಯ 13ನೇ ವಾರ್ಷಿಕೊತ್ಸವದ ನಿಮಿತ್ತ ಗಣಹೋಮ, ದುಗಾ ಹೋಮ ಮತ್ತು ಸುಬ್ರಮ್ಮಣ್ಯ ಹೋಮವನ್ನು ವರಸಿದ್ಧಿ ವಿನಾಯಕ ದೇವಸ್ಥಾನದ ಪ್ರಧಾನ ಅರ್ಚಕರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಹೋಮಗಳ ಯಜಮಾನತ್ವವನ್ನು ರಾಮಚಂದ್ರ ಮೋನೆ ಕುಟುಂಬದವರು, ಪ್ರಸನ್ನ ಕಬಾಡಿ ಕುಟುಂಬದವರು ವಹಿಸಿಕೊಂಡಿದ್ದರು. ದುರ್ಗಾದೇವಿ ಗುಡಿಯ ಅಧ್ಯಕ್ಷೆ ಜಯಶ್ರೀ ಹಿರೇಮಠ ಹಾಗೂ ಸರ್ವ ಸದಸ್ಯರು ದುರ್ಗಾದೇವಿಯ ಸರ್ವಾಲಂಕಾರ ಪೂಜೆಯ ಸೇವೆ ವಹಿಸಿಕೊಂಡಿದ್ದರು. ವಾರ್ಷಿಕೊತ್ಸವದ ನಿಮಿತ್ತ ಅನ್ನ ಸಂತರ್ಪಣೆಯನ್ನು ಪೀರಸಾಬ್ ಕೌತಾಳ ಕುಟುಂಬದವರು ಮಾಡಿದರು. ಕಾರ್ಯಕ್ರಮದಲ್ಲಿ ಜವುಳಗಲ್ಲಿಯ ಹಿರಯರು, ಉದ್ಯಮಿಗಳು ಹಾಗೂ ಗುಡಿಯ ಭಕ್ತರಾದ ಮನಿಷ, ಕಬಾಡಿ, ಖಟವಟೆ, ಪೂಜಾರ ಕುಟುಂಬದವರು ಹಾಗೂ ನೂರಾರು ಭಕ್ತರು ಭಾಗವಹಿಸಿ ದೇವಿಯ ಕೃಪೆಗೆ ಪಾತ್ರರಾದರು.

### ನಲ್-ಜಲ್ ಮಿತ್ರ ಯೋಜನಯಡಿ ಗ್ರಾ.ಪಂ ಮಹಿಳಾ ಅಭ್ಯರ್ಥಿಗಳಿಗೆ ಕೌಶಲ್ಯ ತರಬೇತಿ ಕಾರ್ಯಕ್ರಮ

# ಯೋಜನೆಯಲ್ಲಿ ಮಹಿಳಾ ಸದಸ್ಯರ ಪಾತ್ರ ಮಹತ್ವದ್ದಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರತಿ ಮನೆಗಳಿಗೆ ನಳ ಸಂಪರ್ಕ ಕಲ್ಪಿಸುವ ಕಾರ್ಯ ಅತ್ಯಂತ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಜಲ್ ಜೀವನ್ ಮಿಷನ್ ಮತ್ತು ನಲ್-ಜಲ್ ಮಿತ್ರ ಯೋಜನೆಯಡಿ ಆಯ್ಕೆಯಾದ ಗ್ರಾಮ ಪಂಚಾಯಿತಿಯ ಅಭ್ಯರ್ಥಿಗಳು ತರಬೇತಿಯನ್ನು ಪಡೆದು, ಮುಂಬರುವ ದಿನಗಳಲ್ಲಿ ಪಂಚಾಯಿತಿಗಳಲ್ಲಿ ಟ್ಯಾಂಕ್ ಮೂಲಕ ಹಾಗೂ ನಲ್ಲಿ ಟ್ಯಾಬ್ ಮೂಲಕ ನೀರು ಸರಬರಾಜು ಮಾಡುವ ಕಾರ್ಯ ಕೈಗೊಳ್ಳಲು ಮಹಿಳಾ ಸದಸ್ಯರ ಪಾತ್ರ ಮಹತ್ವದ್ದಾಗಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ತಿಳಿಸಿದರು.



ಇಲ್ಲಿನ ಕೆ.ಎಚ್. ಪಾಟೀಲ್ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಇಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈಮಲ್ಯ ಇಲಾಖೆ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಶನಿವಾರ ನಡೆದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಹಾಗೂ ಸರ್ಕಾರಿ ಸಂಸ್ಥೆಯ ಪ್ರಾಚಾರ್ಯರಾದ ಡಾ. ಮಲ್ಲೂರ ಬಸವರಾಜ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಘವೇಂದ್ರ ದೊಡ್ಡಮನಿ, ಗದಗ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ, ಕೌಶಲ್ಯಾಭಿವೃದ್ಧಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉಮಾ ಪಾಳೆಗಾರ, ಸಂಸ್ಥೆಯ ತರಬೇತಿ ಅಧಿಕಾರಿಗಳಾದ ಎಲ್.ವೈ. ತಳವಾರ, ಸಂಸ್ಥೆಯ ಸಿಬ್ಬಂದಿಗಳಾದ ಭಾರತಿ ಸುಂಕದ, ವಾಣಿಶ್ರೀ ಕುಲಕರ್ಣಿ, ಸುನಿತಾ ಸಾಕೇನವರ, ಸೂಡಿಯ ಸರ್ಕಾರಿ ಐ.ಟಿ.ಐ ಕಾಲೇಜಿನ ತರಬೇತಿದಾರರಾದ ಗಂಗಾಧರ ತಳವಾರ, ರಾಜೇಂದ್ರ ಕಂಗೂರಿ ಸೇರಿದಂತೆ ಜಿಲ್ಲಾ ಪಂಚಾಯಿತಿಯ ಸಿಬ್ಬಂದಿ, ಗದಗ, ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ಗ್ರಾಮ ಪಂಚಾಯಿತಿಗಳ ಮಹಿಳಾ ಅಭ್ಯರ್ಥಿಗಳು ಹಾಜರಿದ್ದರು. ಕಿರಿಯ ತರಬೇತಿ ಅಧಿಕಾರಿಗಳಾದ ಎಂ.ವೈ. ಕುರಿ ಸ್ವಾಗತಿಸಿದರು. ಸಂಸ್ಥೆಯ ಕಛೇರಿ ಅಧೀಕ್ಷಕ ಮಹಮ್ಮದಲಿ ನದಾಫ್ ಕಾರ್ಯಕ್ರಮ ನಿರೂಪಿಸಿದರು. ಕಿರಿಯ ತರಬೇತಿ ಅಧಿಕಾರಿಗಳಾದ ಬಡೇಸಾಬ ತೋಟದ ವಂದಿಸಿದರು.

ಜಲ್ ಜೀವನ್ ಮಿಷನ್ ಮತ್ತು ನಲ್ ಜಲ್ ಮಿತ್ರ ಯೋಜನೆಯಡಿ ಗ್ರಾಮ ಪಂಚಾಯಿತಿ ಮೂಲಕ ಆಯ್ಕೆಯಾಗಿರುವ ಮಹಿಳಾ ಅಭ್ಯರ್ಥಿಗಳಿಗೆ, ಅವರ ಕುಟುಂಬಕ್ಕೆ ಆದಾಯ ಸೃಜನೆ ಮಾಡುವ ನಿಟ್ಟಿನಲ್ಲಿ ಅವಕಾಶ ಕಲ್ಪಿಸಿರುವುದು ಉತ್ತಮ ಬೆಳವಣಿಗೆಯಾಗಿದ್ದು, ಈ ತರಬೇತಿಯ ಅವಧಿಯಲ್ಲಿ ಸಾಫ್ಟ್ ಸ್ಕಿಲ್ ಮತ್ತು ಎಂಪ್ಲಾಯಬಿಲಿಟಿ ಕೌಶಲ್ಯ ಸೇರಿದಂತೆ ಒಟ್ಟು 290 ಗಂಟೆಗಳು ಥಿಯರಿ ಮತ್ತು ಪ್ರಾಯೋಗಿಕ ತರಬೇತಿಯನ್ನು ನೀಡಲಾಗುತ್ತದೆ. ಆನ್ ಜಾಬ್ ತರಬೇತಿಯು 23 ದಿನಗಳು ಇರುತ್ತದೆ ಎಂದು ಭರತ್ ಎಸ್ ತಿಳಿಸಿದರು.

# ಮಸೀದಿ ನಿರ್ಮಾಣ ವಿರೋಧಿಸಿ ಜಿಲ್ಲಾಧಿಕಾರಿಗಳಿಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಖಾನತೋಟ ಓಣಿಯಲ್ಲಿ ಹಿಂದೂ-ಮುಸ್ಲಿಂ ಧರ್ಮದವರು ಕೋಮು ಸೌಹಾರ್ದತೆಯಿಂದ ನಡೆದುಕೊಂಡು ಬಂದಿರುವ ಖಾನಸಾವಲಿ ದರ್ಗಾ ಪಕ್ಕದಲ್ಲಿ ಮಸೀದಿ ಕಟ್ಟುತ್ತಿದ್ದು, ಇದಕ್ಕೆ ಅವಕಾಶ ಕೊಡಬಾರದು, ನಡೆಯುತ್ತಿರುವ ಕಾಮಗಾರಿಯನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಕ್ರಾಂತಿ ಸೇನಾ ಮಹಿಳಾ ಸಂಘಟನೆ ಹಾಗೂ ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಳದ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ರೇಣುಕಾ ಕಬಾಡಿ ಹಾಗೂ ಕ್ರಾಂತಿ ಸೇನಾ ಸಂಘಟನೆಯ ರಾಣಿ ಚಂದಾವರಿ ಮಾತನಾಡಿ, ನೂರಾರು ವರ್ಷಗಳಿಂದ ಖಾನಸಾವಲಿ ದರ್ಗಾ ಧಾರ್ಮಿಕ ಶ್ರದ್ಧಾ ಕೇಂದ್ರವಾಗಿ ಹಿಂದೂ-ಮುಸ್ಲಿಂ ಕೋಮಿನ ಜನರು ಭಾಗವಹಿಸುತ್ತಾ ಪೂಜೆ, ಪುನಸ್ಕಾರ ಮಾಡುತ್ತಾ ಬಂದಿದ್ದಾರೆ. ದರ್ಗಾ-ಕ್ಕೆ ಹಿಂದೂ ಸಮಾಜದ ಸಾಕಷ್ಟು ಯುವತಿಯರು, ಮಹಿಳೆಯರು ದಿನನಿತ್ಯ ಹೋಗಿ ಪೂಜೆ ಸಲ್ಲಿಸುತ್ತಾರೆ. ಪಕ್ಕದಲ್ಲಿ ಮಸೀದಿಯಾದಲ್ಲಿ ಕೆಲ ಯುವಕರು ಗುಂಪು ಕಟ್ಟಿಕೊಂಡು ನಿಲ್ಲುವುದು, ಚುಡಾಯಿಸುವುದು ಇತ್ಯಾದಿ ಘಟನೆಗಳು ನಡೆಯುವ ಸಂಭವವಿದ್ದು, ಮಸೀದಿ ನಿರ್ಮಾಣಕ್ಕೆ ಅವಕಾಶ ಕೊಡಬಾರದೆಂದು ವಿನಂತಿಸಿದರು. ಈ ಸಂದರ್ಭದಲ್ಲಿ ರಾಜರಾಜೇಶ್ವರಿ ಮಹಿಳಾ ಮಂಡಳದ ಸರೋಜಾಬಾಯಿ ಟಿಕಂದಾರ, ಅಕ್ಷತಾ ಪವಾರ, ಪ್ರಭಾವತಿ ಗುತ್ತಿ, ರಕ್ಷಿತಾ ರೋಣದ, ಪುಷ್ಪಾ ನಾಕೋಡ, ಶೋಭಾ ನಾಕೋಡ, ರೂಪಾ ಶಹಾಪೂರ, ನಾಗವ್ವ ಅಸೂಂಡಿ, ಸರಸ್ವತಿ ಹುಣಸಿಮರದ, ಶ್ರೀದೇವಿ ಕಬಾಡಿ, ಗೋದಾವರಿ ಕಬಾಡಿ, ವಿಜಯಲಕ್ಷ್ಮಿ ಕಬಾಡಿ, ನಿಕಿತಾ ಹೊಸಳ್ಳಿ, ರೂಪಾ ಪವಾರ ಮುಂತಾದವರು ಉಪಸ್ಥಿತರಿದ್ದರು.

### ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಗದಗ ವಿಭಾಗದಲ್ಲಿ ಅರಿವು ಕಾರ್ಯಕ್ರಮ

# ಸಾಂಕ್ರಾಮಿಕ ರೋಗಗಳ ಎಚ್ಚರಿಕೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಸಾಂಕ್ರಾಮಿಕ ರೋಗಗಳಾದ ಡೆಂಗೀ, ಚಿಕುನ್‌ಗುನ್ಯಾ, ಮಲೇರಿಯಾ, ಮೆದುಳು ಜ್ವರ, ಆನೆಕಾಲು ರೋಗ ಮತ್ತು ಜಿಕಾ ವೈರಸ್ ಸೊಳ್ಳೆಗಳಿಂದ ಹರಡುವ ರೋಗಳಾಗಿವೆ. ಮುಖ್ಯವಾಗಿ ಡೆಂಗೀ ಕಾಯಿಲೆಯಲ್ಲಿ ಹಣೆಯ ಮುಂಭಾಗದಲ್ಲಿ ನೋವು, ಕಣ್ಣುಗಳ ಚಲನೆಯ ತೊಂದರೆ, ಮಾಂಸಖಂಡಗಳ ನೋವು, ವಿಪರೀತ ಜ್ವರ, ಹೊಟ್ಟೆ ನೋವು, ಸುಸ್ತು, ಮತ್ತು ವಾಕರಿಕೆ ಮುಂತಾದ ಲಕ್ಷಣಗಳು ಕಂಡು ಬರುತ್ತವೆ ಎಂದು ಗದಗ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳು ಡಾ. ಹೆಚ್.ಎಲ್. ಗಿರಡ್ಡಿ ವಿವರಿಸಿದರು.



ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಗದಗ ವಿಭಾಗದಲ್ಲಿ ಡೆಂಗೀ ಕುರಿತು ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಹಮ್ಮಿಕೊಂಡಿದ್ದ ಅರಿವು ಕಾರ್ಯಕ್ರಮದಲ್ಲಿ ಅವರು ಮಾಹಿತಿ ನೀಡುತ್ತಿದ್ದರು.

ಮಲೇರಿಯಾ ರೋಗವು ಅನಾಫಿಲಿಸ್ ಹೆಣ್ಣು ಸೊಳ್ಳೆ ಕಚ್ಚುವುದರಿಂದ ರೋಗ ಬರುತ್ತದೆ. ಗೋವಾ, ದಕ್ಷಿಣ ಕನ್ನಡ, ಮಂಗಳೂರು ಮತ್ತು ಉಡುಪಿ ಜಿಲ್ಲೆಗಳಲ್ಲಿ ಮಲೇರಿಯಾ ರೋಗವು ಹೆಚ್ಚಿನ ಪ್ರಮಾಣದಲ್ಲಿ ಕಂಡುಬರುತ್ತಿದ್ದು, ನಮ್ಮ ಭಾಗದ ಜನರು ಅಲ್ಲಿ ದುಡಿಯಲು ಹೋದ ಸಂದರ್ಭದಲ್ಲಿ ಮಲೇರಿಯಾ ರೋಗ ಕಾಣಿಸಿಕೊಳ್ಳುತ್ತದೆ. ಮರಳಿ ಈ ಭಾಗಕ್ಕೆ ಬಂದಾಗ ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖಾ ಸಿಬ್ಬಂದಿಗಳು ಭೇಟಿ ನೀಡಿ ರಕ್ತ ಪರೀಕ್ಷೆ ಮಾಡಿ ಮಲೇರಿಯಾ ಖಚಿತಪಟ್ಟ ರೋಗಿಗೆ ಚಿಕಿತ್ಸೆ ನೀಡುತ್ತಾರೆ ಎಂದು ತಿಳಿಸಿದರು.

ವಿಭಾಗೀಯ ನಿಯಂತ್ರಣ ಅಧಿಕಾರಿ ಡಿ.ಎಮ್. ದೇವರಾಜ ಸ್ವಾಗತಿಸಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರಿಯಾಜ್ ಖಾ.ಫೂಡುನಾಯ್ಕರ ವಂದಿಸಿದರು.

ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಾರ್ಯಲಯದ ಸಿಬ್ಬಂದಿಗಳಾದ ಅಜಯಕುಮಾರ ಆರ್.ಕಲಾಲ, ಮಹಮ್ಮದರಫಿ ಕದಾಂಪೂರ, ಈರಣ್ಣ ಎಸ್. ಚಲ್ಮಿ, ಅನಿತಾ ಬಾಗಲಕೋಟ ಹಾಗೂ ಗದಗ ವಿಭಾಗೀಯ ನಿಯಂತ್ರಣ ಅಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಕೀಟಜನ್ಯ ಶಾಸ್ತ್ರಜ್ಞರಾದ ಅನ್ನಪೂರ್ಣ ಶೆಟ್ಟರ ಮಾತನಾಡುತ್ತಾ, ಈಡೀಸ್ ಸೊಳ್ಳೆಗಳ ಉತ್ಪತ್ತಿ ಹಾಗೂ ನಿಯಂತ್ರಣ ಕುರಿತು ವಿವರಿಸಿ, ನಿಯಂತ್ರಣಕ್ಕಾಗಿ ಟೈರ್‌ಗಳನ್ನು ಮಳೆ ನೀರು ಸಂಗ್ರಹವಾಗ ಪ್ರದೇಶಗಲ್ಲಿ ವಿಲೇವಾರಿ ಮಾಡುವುದು, ಲಾರ್ವಾ ನಾಶಕ ಬಳಸುವುದು, ಪ್ಲಾಸ್ಟಿಕ್ ಹೊದಿಕೆಗಳಲ್ಲಿ ನೀರು ಶೇಖರಣೆಯಾಗದಂತೆ ನೋಡಿಕೊಳ್ಳುವುದು, ಕಾರ್ಮಿಕರಿಗೆ ಸೊಳ್ಳೆ ನಿರೋಧಕಗಳನ್ನು ಬಳಸುವುದು ಇತ್ಯಾದಿಗಳ ಕುರಿತು ತಿಳಿಸಿದರು.

### ಆಹಾರ ಸುರಕ್ಷತೆ, ಗುಣಮಟ್ಟ ಕಾಯ್ದೆ ಕುರಿತ ವಿಚಾರ ಸಂಕಿರಣದಲ್ಲಿ ಡಾ ರಾಜೇಂದ್ರ ಎಸ್.ಗಡಾದ

# ಆಹಾರ ಸುರಕ್ಷತೆಯ ಬಗ್ಗೆ ಗಮನವಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯು 50ನೇ ವರ್ಷದ ಸುವರ್ಣ ಮಹೋತ್ಸವ ಆಚರಿಸಿಕೊಳ್ಳುತ್ತಿರುವ ಸಂಸ್ಥೆಯಾಗಿದ್ದು, ರಾಜ್ಯದಲ್ಲಿ ವ್ಯಾಪಾರಸ್ಥರ ಮತ್ತು ಕೈಗಾರಿಕೋದ್ಯಮಿಗಳ ಹಿತವನ್ನು ಕಾಪಾಡುವದರೊಂದಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮಹತ್ವದ ಕಾಯ್ದೆ ಕಾನೂನುಗಳ ಬಗ್ಗೆ ಮಾಹಿತಿ, ಪ್ರೋತ್ಸಾಹ ನೀಡುವ ಸಂಸ್ಥೆಯಾಗಿದೆ ಎಂದು ಆಹಾರ ಸುರಕ್ಷತಾ ಅಧಿಕಾರಿ ಡಾ. ರಾಜೇಂದ್ರ ಎಸ್.ಗಡಾದ ಅಭಿಪ್ರಾಯಪಟ್ಟರು.



ಶುಕ್ರವಾರ ಸಂಸ್ಥೆಯ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಲಿಂ. ಸುರೇಶ ಸೋಮಯ್ಯ ಶಾಬಾದಿಮಠ, ಲಿಂ. ಈಶ್ವರಪ್ಪ ಮಲ್ಲಿಕಾರ್ಜುನ ಬೇಲೇರಿ, ಲಿಂ. ಪಶುಪತಯ್ಯ ಎಸ್. ಶಾಬಾದಿಮಠ, ಲಿಂ. ಚಂದ್ರಶೇಖರಪ್ಪ ಐ.ಮುನವಳ್ಳಿ, ಲಿಂ. ಕುಂದನಮಲ್ ಧನರಾಜ್ ಶಹಾ ಇವರುಗಳ ಸ್ಮಾರಕ ದತ್ತಿ ಉಪನ್ಯಾಸದ ನಿಮಿತ್ತ ಹಮ್ಮಿಕೊಂಡಿದ್ದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರದಲ್ಲಿ ಆಹಾರ ವಸ್ತುಗಳಿಗೆ ಸಂಬಂಧಿಸಿದಂತೆ ಜನರಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಆಹಾರ ಪದಾರ್ಥಗಳನ್ನು ನೀಡುವ ಉದ್ದೇಶದಿಂದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ-2006 ಹಾಗೂ ಅದರಡಿ ರಚಿಸಲಾಗಿರುವ ನಿಯಮಗಳು-2011 ಮತ್ತು ನಿಬಂಧನೆಗಳು 5ನೇ ಅಗಸ್ಟ್ 2011ರಿಂದ ಜಾರಿಗೆ ಬಂದಿವೆ. ಈ ಕಾಯ್ದೆಯಡಿಯಲ್ಲಿ ಜನರಿಗೆ ಬೇಕಾಗಿರುವ ಪದಾರ್ಥಗಳು ಗುಣಮಟ್ಟದಾಗಿರಬೇಕು ಮತ್ತು ಕಲಬೆರಕೆಯಾಗಬಾರದು ಎಂಬ ಉದ್ದೇಶದಿಂದ ಈ ಕಾಯ್ದೆಯನ್ನು ಜಾರಿಗೆ ತರಲಾಗಿದೆ. ಈ ಪರವಾನಿಗೆಯನ್ನು ಆಹಾರ ವಸ್ತುಗಳ ತಯಾರಕರು/ಸಂಸ್ಕರಣೆ/ಸಾಗಣೆ/ ವಿತರಣೆ /ಪ್ಯಾಕಿಂಗ್, ಸಣ್ಣ- ಅತೀ ಸಣ್ಣ ಮತ್ತು ಗುಡಿ ಕೈಗಾರಿಕೆಗಳು ಮತ್ತು ಮಾರಾಟದಲ್ಲಿ ನಿರತರಾಗಿರುವವರು ನೋಂದಣಿ / ಪರವಾನಗಿ ಪಡೆದಿರಬೇಕು ಎಂದು ಮಾಹಿತಿ ನೀಡಿದರು.

ಸಂಸ್ಥೆಯ ಇಂಡಸ್ಟ್ರೀಯಲ್ ಉಪ ಸಮಿತಿ ಚೇರಮನ್ ಮದುಸೂಧನ ಡಿ.ಪುಣೇಕರ ಸ್ವಾಗತಿಸಿದರು. ಲಿಂಗೈಕ್ಯರಾದ ಮಹನೀಯರ ಪರಿಚಯವನ್ನು ಸಂಸ್ಥೆಯ ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ ಮಾಡಿದರು. ಸಭೆಯಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಗದಗ-ಬೆಟಗೇರಿ ಅವಳಿ ನಗರದ ಸಂಘ-ಸಂಸ್ಥೆಗಳ ಸದಸ್ಯರು, ಗದಗ ಜಿಲ್ಲೆಯ ತಾಲೂಕುಗಳಿಂದ ಆಗಮಿಸಿದ ವ್ಯಾಪಾರಸ್ಥರು ಮತ್ತು ಕೈಗಾರಿಕೋದ್ಯಮಿಗಳು ಪಾಲ್ಗೊಂಡಿದ್ದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ತಿಳಿಸಿದ್ದಾರೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಮಾತನಾಡುತ್ತಾ, ತಮ್ಮ ತಮ್ಮ ಘಟಕಗಳಿಗೆ ಕಾಯಿದೆಗೆ ಅನುಗುಣವಾಗಿ ನೋಂದಣಿ/ ಪರವಾನಗಿ ಮಾಡಿಸಬೇಕು. ಘಟಕದಲ್ಲಿ ನೈರ್ಮಲ್ಯ ಕಾಯ್ದುಕೊಳ್ಳುವುದು ಅತೀ ಅವಶ್ಯವಾಗಿದೆ. ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದು, ಘಟಕದ ಪರಸರದ ಶುಚಿತ್ವ, ತ್ಯಾಜ್ಯ ವಸ್ತುಗಳ ಸಂಗ್ರಹ ವಿಲೇವಾರಿಗೆ ವಿಶೇಷ ಗಮನ ನೀಡುವುದು ಅತೀ ಅವಶ್ಯವಾಗಿದೆ. ಜೊತೆಗೆ ಪ್ರತಿ ವರ್ಷ ವಾರ್ಷಿಕ ವರದಿಯನ್ನು ಇಲಾಖೆಗೆ ನೀಡಿ ನವೀಕರಣ ಮಾಡಬೇಕು ಮತ್ತು ಪರವಾನಿಗೆ ಇಲ್ಲದವರು ಕೂಡಾ ಪರವಾನಿಗೆ ಪಡೆದುಕೊಳ್ಳಬೇಕೆಂದು ತಿಳಿಸಿದರು.

# ಬೇಡಿಕೆಗಳನ್ನು ಈಡೇರಿಸುವಂತೆ ಸಚಿವರಿಗೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ಗದಗ-ಬೆಟಗೇರಿ ನಗರಸಭೆ ಕಾರ್ಯಾಲಯ ಶಾಖೆಯ ಅಧ್ಯಕ್ಷರಾದ ಸಿ.ಆರ್. ಹಾದಿಮನಿ, ಜಿಲ್ಲಾಧ್ಯಕ್ಷ ಹೇಮೇಶ ಯಟ್ಟಿ, ಜಿಲ್ಲಾ ಉಪಾಧ್ಯಕ್ಷ ಕೆಂಚಪ್ಪ ಎಫ್.ಪೂಜಾರ, ಗೌರವಾಧ್ಯಕ್ಷ ನಾಗೇಶ ಬಳ್ಳಾರಿ ಇವರುಗಳ ನೇತೃತ್ವದಲ್ಲಿ ಕಾನೂನು, ಸಂಸದೀಯ ವ್ಯವಹಾರ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವರಿ ಸಚಿವ ಹೆಚ್.ಕೆ. ಪಾಟೀಲರಿಗೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಸಿ.ಆರ್. ಹಾದಿಮನಿ ಮಾತನಾಡಿ, ಪೌರ ನೌಕರರನ್ನು ಸರ್ಕಾರಿ ನೌಕರರೆಂದು ಘೋಷಿಸುವುದು, ಗುತ್ತಿಗೆ/ಹೊರಗುತ್ತಿಗೆ ಮೂಲಕ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ನೇರ ವೇತನ ಪಾವತಿ ಮಾಡುವುದು, ಪೌರಕಾರ್ಮಿಕರ ವಿಶೇಶ ನೇಮಕಾತಿಯಡಿ ಪೌರಕಾರ್ಮಿಕರು ನೇಮಕಾತಿ ಹೊಂದಿದ್ದು, ಸದರಿ ನೌಕರರಿಗೆ ಸರ್ಕಾರವು ನಗರ ಸ್ಥಳೀಯ ಸಂಸ್ಥೆ ಸ್ಥಳೀಯ ನಿಧಿಯಿಂದ ವೇತನ ಪಡೆಯಲು ಆದೇಶಿಸಿಲಾಗಿದ್ದನ್ನು ರದ್ದುಪಡಿಸಿ, ಎಸ್.ಎಫ್.ಸಿ ಅನುದಾನದಡಿ ವೇತನ ನೀಡಬೇಕು ಇತ್ಯಾದಿ ಬೇಡಿಕೆಗಳನ್ನು ಈಡೇರಿಸುವಂತೆ ವಿನಂತಿಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ಶೇಖಪ್ಪ ತಮ್ಮಣ್ಣವರ, ವಿರೂಪಾಕ್ಷಪ್ಪ ರಾಮಗಿರಿ, ಸಣ್ಣರಾಮಪ್ಪ ಬಳ್ಳಾರಿ, ವೆಂಕಟೇಶ ಬಳ್ಳಾರಿ, ಅರವಿಂದ ಕುರ್ತಕೋಟಿ, ಸಣ್ಣಪ್ಪ ಬೋಳಮ್ಮನವರ, ಪಂಚಾಕ್ಷರಿ ದೊಡ್ಡಮನಿ, ಆಂಜನೇಯ ಪೂಜಾರ, ಶಿವು ಜಂಬಲದಿನ್ನಿ, ವಿಶ್ವನಾಥ ದೊಡ್ಡಮನಿ, ಲಕ್ಷ್ಮಣ ಕೋಟ್ನಿಕಲ್, ಶ್ರೀಪಾದ ಹೊಸಳ್ಳಿ, ನಾರಾಯಣ ಬಳ್ಳಾರಿ, ಮಂಜು ನರಗುಂದ, ರಮೇಶ ಬಾರಕೇರ, ಪರಶುರಾಮ ಸಂಗಾಪೂರ, ಮಲ್ಲಿಕಾರ್ಜುನ ನಾವಳ್ಳಿ, ಎಫ್.ಬಿ. ಬೆನ್ನಾಮಟ್ಟಿ, ಟಿ.ಟಿ. ಉಪ್ಪಾರ, ಮೈಲಾರಪ್ಪ ಬಂಡಿವಾಡ, ರಂಗನಾಥ ಖೋಣಿ, ರಾಜು ಆರಟ್ಟಿ, ರಿಯಾಜ್ ಬೊದ್ಲೆಖಾನ, ಗುರು ಒಡೆಯರ, ರಾಘವೇಂದ್ರ ಅಕ್ಕಿ, ರಾಮು ಕೋಟ್ನಿಕಲ್, ದುರಗಪ್ಪ ಪೂಜಾರ, ಶಿವಲಿಂಗಪ್ಪ ಸೋಮಪೂರ, ಸಂಗವ್ವ ಸೋಮಪೂರ, ಮಂಜುಳಾ ಯಗ್ಗಪಲ್ಲೆ, ಶಂಕರವ್ವ ಹರಿಜನ ಮುಂತಾದವರು ಉಪಸ್ಥಿತರಿದ್ದರು.

# ನಿಮ್ಮೂರಲ್ಲೇ ಉದ್ಯೋಗ ಖಾತ್ರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಜನರು ಬೇಸಿಗೆಯಲ್ಲಿ ನಗರ ಪ್ರದೇಶಗಳಿಗೆ ಗುಳೆ ಹೋಗುವುದನ್ನು ತಪ್ಪಿಸಲು ಸರ್ಕಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 'ದುಡಿಯೋಣ ಬಾ' ಅಭಿಯಾನ ಆರಂಭಿಸಿದೆ ಎಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಗದಗ ತಾಲೂಕಿನ ಬಹುತೇಕ ಪಂಚಾಯಿತಿಗಳಲ್ಲಿ ಉದ್ಯೋಗ ಖಾತ್ರಿ ಕೆಲಸ ಆರಂಭಿಸಲಾಗಿದೆ. ನಿತ್ಯ 8000ಕ್ಕೂ ಹೆಚ್ಚು ಜನರು ಕೆಲಸ ನಿರ್ವಹಿಸುತ್ತಿದ್ದಾರೆ. ಆಯುಕ್ತಾಲಯದ ಆದೇಶದಂತೆ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ಮೇ ತಿಂಗಳಾದ್ಯಂತ ಕೆಲಸ ಒದಗಿಸಲು ದುಡಿಯೋಣ ಬಾ ಅಭಿಯಾನ ಹಮ್ಮಿಕೊಳ್ಳಲು ಪಿಡಿಒ ಮತ್ತು ಎಲ್ಲ ಹಂತದ ನರೇಗಾ ಯೋಜನೆಯ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.



ತಾಲೂಕು ವ್ಯಾಪ್ತಿಯಲ್ಲಿ ಈಗಾಗಲೇ 1,16,930 ಮಾನವ ದಿನಗಳನ್ನು ಸೃಜನೆ ಮಾಡಲಾಗಿದೆ. ತಾಲೂಕಿನಲ್ಲಿ ಒಟ್ಟು 24,537 ಸಕ್ರಿಯ ಉದ್ಯೋಗ ಚೀಟಿಗಳಿದ್ದು, 50,440 ಸಕ್ರಿಯ ಕೂಲಿ ಕಾರ್ಮಿಕರು ಇದ್ದಾರೆ ಎಂದರು. ಕೃಷಿ ಗ್ರಾಮೀಣ ಜನರ ಮೂಲ ಉದ್ಯೋಗ ಮುಂದಿನ ದಿನಗಳಲ್ಲಿ ಕೃಷಿ ಚಟುವಟಿಕೆಗೆ ಅಗತ್ಯವಾದ ಬೀಜ, ರಸಗೊಬ್ಬರ, ಮಕ್ಕಳನ್ನು ಶಾಲೆ/ಕಾಲೇಜಿಗೆ ದಾಖಲಿಸಲು ಶುಲ್ಕ ಪಾವತಿಸಲು ಉದ್ಯೋಗ ಖಾತ್ರಿಯಲ್ಲಿ ದುಡಿದ ಹಣವನ್ನು ಬಳಕೆ ಮಾಡಬಹುದು. ಇದಲ್ಲದೇ ಇನ್ನಿತರೆ ಜೀವನದ ವೆಚ್ಚಗಳಿಗೆ ಬಳಸಿಕೊಳ್ಳಬಹುದು ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಸೋಮೇಶ್ವರ ಪ್ರೌಢಶಾಲೆಯ ಫಲಿತಾಂಶ ಶೇ.66.6

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ



ಸಮೀಪದ ಕೋಟುಮಚಗಿಯ ಶ್ರೀ ಸೋಮೇಶ್ವರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶವು ಶೇ. 66.6ರಷ್ಟಾಗಿದೆ ಎಂದು ಮುಖ್ಯ ಶಿಕ್ಷಕಿ ವಿ.ಎಸ್. ಚಲವಾದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷೆಗೆ ಕುಳಿತ 36 ವಿದ್ಯಾರ್ಥಿಗಳಲ್ಲಿ 3 ವಿದ್ಯಾರ್ಥಿನಿಯರು ಡಿಸ್ಟಿಂಕ್ಷನ್‌ನಲ್ಲಿ, 9 ವಿದ್ಯಾರ್ಥಿಗಳು ಪ್ರಥಮ ವರ್ಗದಲ್ಲಿ ಮತ್ತು 12 ವಿದ್ಯಾರ್ಥಿಗಳು ಪಾಸಾಗಿದ್ದಾರೆ. ತಸ್ಲೀಮಾ ನದಾಫ್ ಶೇ. 95.52 ಅಂಕಗಳೊಂದಿಗೆ ಪ್ರಥಮ ಸ್ಥಾನ, ಅಂಬಿಕಾ ಮಾಲಿಪಾಟೀಲ ಮತ್ತು ಲಕ್ಷ್ಮಿ ಅಕ್ಕಿ ಶೇ. 87.2 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ತಸ್ಲೀಮಾ ನದಾಫ್ ಕೋಟುಮಚಗಿ ಪರೀಕ್ಷಾ ಕೇಂದ್ರಕ್ಕೆ ಪ್ರಥಮ ಸ್ಥಾನ ಪಡೆದಿದ್ದಾಳೆ.


ಕರ್ನಾಟಕ ಸರ್ಕಾರ (ಖಜಾನೆ ಇಲಾಖೆ)

**ಉಪ ನಿರ್ದೇಶಕರು, ಜಿಲ್ಲಾ ಖಜಾನೆ ಕಾರ್ಯಾಲಯ, ಕೊಠಡಿ ನಂ 32 ಜಿಲ್ಲಾ ಆಡಳಿತ ಭವನ ಗದಗ-582103**

ದೂ : 08372-237477 E-Mail : dto.gadag.karnataka.gov.in

ಕ್ರಸಂ/ಜಿಖಗ/ಸಿಬ್ಬಂದಿ(1)/ಹೊ.ಗು.ಸಿ/2025-26 ದಿನಾಂಕ : 02-05-2025

**ಟೆಂಡರ್ ಪ್ರಕಟಣೆ**

ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ, ಹಾಗೂ ವ್ಯಾಪ್ತಿಯ ಉಪ ಖಜಾನೆಗಳಲ್ಲಿ ಖಾಲಿ ಇರುವ 01 ಡಾಟಾ ಎಂಟ್ರಿ ಆಪರೇಟರ್ ಹಾಗೂ 05 ಗ್ರೂಪ್-ಡಿ ಹುದ್ದೆಗಳನ್ನು ದಿನಾಂಕ : **01-06-2025** ರಿಂದ ದಿನಾಂಕ : **31-03-2026** ರವರೆಗೆ ಅಥವಾ ಸರ್ಕಾರದಿಂದ ಖಾಯಂ ಸಿಬ್ಬಂದಿ ನೇಮಕವಾಗುವ ವರೆಗೆ ಅಥವಾ ಈ ಕಛೇರಿಯಿಂದ ಮುಂದಿನ ಆದೇಶವಾಗುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಜಿಲ್ಲಾ ಖಜಾನೆ ಗದಗ ಹಾಗೂ ವ್ಯಾಪ್ತಿಯ ಉಪ ಖಜಾನೆಗಳಾದ ಉಪ ಖಜಾನೆ ನರಗುಂದ, ಮುಂಡರಗಿ, ಶಿರಹಟ್ಟಿ, ಗಜೇಂದ್ರಗಡ ಹಾಗೂ ಲಕ್ಷ್ಮೇಶ್ವರ ಕಛೇರಿಗಳಲ್ಲಿ ಖಾಲಿ ಇರುವ 05 ಗ್ರೂಪ್ ಡಿ ಹುದ್ದೆಗಳು ಹಾಗೂ ಜಿಲ್ಲಾ ಖಜಾನೆ ಗದಗ ಕಛೇರಿಗೆ ಒಂದು ದತ್ತಾಂಶ ನಮೂದು ಸಹಾಯಕರನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯುವ ಸಲುವಾಗಿ ಇ-ಟೆಂಡರ್ DOTR/2025-26/SE019 ಅಧಿಸೂಚನೆಯನ್ನು ಹೊರಡಿಸಲಾಗಿದೆ. ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ.

ಸಹಿ/- ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಗದಗ

ವಾಸಾಸಂಇ/ಗದಗ/ಕೆ.ಎಸ್.ಎಂ.ಸಿ.ಎ/48/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka